ಶ್ರೀ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 163 RNI Number : KNKAN/25/A2770 21-06-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :163 ರಾಯಚೂರು 21-06-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಸಾರ್ವಜನಿಕರ ಕುಂದುಕೊರತೆ ನಿವಾರಣೆಗೆ ಪ್ರಜಾಸೇವೆ ಇಲಾಖೆ ಸ್ಥಾಪನೆ: ಸಿಎಂ ಡಿ.ಕೆ.

ಬೆಂಗಳೂರು, ಜೂ.20: ''ಸಾರ್ವಜನಿಕರ ಕುಂದುಕೊರತೆಗಳು, ಸಾರ್ವಜನಿಕ ಹೋರಾಟಗಳ ಅಹವಾಲುಗಳನ್ನು ಆಲಿಸಲು ''ಪ್ರಜಾಸೇವೆ ಇಲಾಖೆ'' ಯನ್ನು ಹೊಸದಾಗಿ ಪ್ರಾರಂಭ ಮಾಡಲಾಗುತ್ತಿದೆ. ಪ್ರತ್ಯೇಕ ಸಚಿವರಿಗೆ ಇದರ ಜವಾಬ್ದಾರಿವಹಿಸಲಾಗುವುದು'' ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ವಿಧಾನಸೌಧದಲ್ಲಿ ಶನಿವಾರ ನಡೆದ ಸಚಿವ ಸಂಪುಟ ಸಭೆಯ ನಂತರ ಶಿವಕುಮಾರ್ ಅವರು ಮಾಧ್ಯಮಗೋಷ್ಠಿಯಲ್ಲಿ ಮಾಹಿತಿ ನೀಡಿದರು.

''ಜನರ ಕಷ್ಟ ಭಾವನೆಗಳನ್ನು ಅರಿತು, ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸುವುದು ನಮ್ಮ ಸರ್ಕಾರದ ಗುರಿ. ಹೀಗಾಗಿ ಈ ಇಲಾಖೆಗೆ ಹಿರಿಯ ಐಎಎಸ್ ಅಧಿಕಾರಿಯನ್ನು ನೇಮಿಸಲಾಗುವುದು. ಅವರು ಎಲ್ಲಾ ಸಮಸ್ಯೆಗಳನ್ನು ಪರಿಶೀಲನೆ ಮಾಡಿ ಮಾಹಿತಿ ನೀಡುವ ಕೆಲಸ ಮಾಡಲಾಗುವುದು. ಈ ಮೂಲಕ ಜನರಿಗೆ ನ್ಯಾಯ ಒದಗಿಸಲು ಸರ್ಕಾರ ಮುಂದಾಗಿದೆ. ನನಗೆ ಹಾಗೂ ಇತರೇ ಸಚಿವರಿಗೆ ನೀಡಿದ ಮನವಿಗಳನ್ನು ಈ ಇಲಾಖೆ ಅಡಿಯಲ್ಲಿ ತರಲು ಆಲೋಚಿಸಲಾಗಿದೆ'' ಎಂದರು. ''ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿಯ ಜಿಲ್ಲೆಯ ಕ್ಷೇತ್ರಗಳಲ್ಲಿ ವಾರಕ್ಕೆ ಒಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆ ಮೂಲಕ ಜನಸ್ಪಂದನ ಸಭೆಗಳನ್ನು ನಡೆಸಬೇಕು. ಆನಂತರ ಅದನ್ನು ಪರಿಶೀಲಿಸುವ ಕೆಲಸ ಮಾಡಲಾಗುವುದು'' ಎಂದರು.

ವಿದ್ಯುತ್ ಸಂಪರ್ಕ ಪಡೆಯಲು 15 ದಿನಗಳ ಕಾಲಾವಕಾಶ : ''31.05.2026 ರ ಒಳಗೆ ಪೂರ್ಣಗೊಂಡಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ವಿನಾಯಿತಿ ನೀಡಲಾಗಿದ್ದು, ಈ ವಿಚಾರವಾಗಿ ಸರ್ಕಾರಿ ಆದೇಶ ಬಂದ ದಿನದಿಂದ 15 ದಿನಗಳ ಕಾಲಾವಕಾಶ ನೀಡಲಾಗುವುದು. ಕಟ್ಟಡ ಮಾಲೀಕರು ಕಟ್ಟಡದ ಜೊತೆಗಿನ ಫೋಟೋ ಹಾಗೂ ಜಿಪಿಎಸ್ ದಾಖಲೆ ಕಡ್ಡಾಯವಾಗಿ ಸಲ್ಲಿಕೆ ಮಾಡಬೇಕು'' ಎಂದರು.

''ಗ್ರಾಮೀಣ ಭಾಗದ, ರೇಷ್ಮೆ ಸಾಕಾಣಿಕೆ ಮನೆ, ಕೊಟ್ಟಿಗೆಗಳಿಗೆ ವಿನಾಯಿತಿ ನೀಡಲಾಗಿದೆ. ಹೊಸದಾಗಿ ನಿರ್ಮಾಣ ಮಾಡಿದರೆ ಅವಕಾಶವಿಲ್ಲ. ಇಂಧನ ಸಚಿವರು, ಗ್ರಾಮೀಣಾಭಿವೃದ್ದಿ, ನಗರಾಭಿವೃದ್ದಿ ಸಚಿವರ ಬಳಿ ಇದರ ಬಗ್ಗೆ ವಿವರವಾಗಿ ಚರ್ಚಿಸಲಾಗಿದೆ'' ಎಂದು ಮಾಹಿತಿ ನೀಡಿದರು.

ಯಾದಗಿರಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅನುಮೋದನೆ : ''ಯಾದಗಿರಿಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ100 ಕೋಟಿ ರೂ. ವೆಚ್ಚದಲ್ಲಿ ನೂತನ 200 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. 18 ಕೋಟಿ ರೂ. ವೆಚ್ಚದಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆರು ಸಿವಿಲ್ ಕಾಮಗಾರಿಗಳಿಗೆ ಮತ್ತು ಬೆಂಗಳೂರು ವೈದ್ಯಕೀಯ ಸಂಶೋಧನಾ ಆಸ್ಪತ್ರೆಗೆ ಸುಮಾರು 60 ಕೋಟಿ ವೆಚ್ಚದಲ್ಲಿ ವೈದ್ಯಕೀಯ ಉಪಕರಣಗಳ ಖರೀದಿಗೆ ಆಡಳಿತಾತ್ಮಕ ಅನುಮೋದನೆ'' ಎಂದು ಮಾಹಿತಿ ನೀಡಿದರು.

620 ಬಸ್ ಖರೀದಿಗೆ ಅನುಮೋದನೆ : 620 ನೂತನ ಬಸ್ ಗಳ ಖರೀದಿಗೆ 235 ಕೋಟಿ ರೂ. ವೆಚ್ಚ ಸೇರಿದಂತೆ ಎಲ್ಲಾ ಸಾರಿಗೆ ನಿಗಮಗಳ ಅಡಿಯಲ್ಲಿ 11 ಕಡೆ ಎಲೆಕ್ಟ್ರಿಕ್ ಬಸ್ ಗಳ ಡಿಪೋಗಳನ್ನು ತೆರೆಯಲು 112 ಕೋಟಿ ವೆಚ್ಚ ಮಾಡಲಾಗುವುದು. 30 ಕೋಟಿ ರೂ. ವೆಚ್ಚದಲ್ಲಿ ಸಂಡೂರು ತಾಲ್ಲೂಕು ಕೇಂದ್ರದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಾಣ. 620 ಬಸ್ ಗಳ ಪೈಕಿ ಗ್ರಾಮೀಣ ಪ್ರದೇಶಗಳಿಗೆ 400 ಬಸ್ ಗಳು ಹಾಗೂ ವಾಯುವ್ಯ ಸಾರಿಗೆ ನಿಗಮಕ್ಕೆ 220 ಬಸ್ ಗಳ ಖರೀದಿಗೆ ಅನುಮತಿ ನೀಡಲಾಗಿದೆ'' ಎಂದರು.

ಕರ್ನಾಟಕದ ವಿದ್ಯಾರ್ಥಿಗಳಿಗೆ ದೆಹಲಿಯಲ್ಲಿ ಕರ್ನಾಟಕ ಭವನ : ಯುಪಿಎಸ್ ಸೇರಿದಂತೆ ಇತರೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಾಗೂ ಒಂದೇ ಸೂರಿನಡಿ ಎಲ್ಲಾ ಅನುಕೂಲ ದೊರೆಯಬೇಕು ಎನ್ನುವ ಕಾರಣಕ್ಕೆ ಕೆಐಡಬ್ಲ್ಯೂಬಿ ವತಿಯಿಂದ ನವ ದೆಹಲಿಯಲ್ಲಿ ಕರ್ನಾಟಕ ಭವನ 4 ಅನ್ನು ನಿರ್ಮಾಣ ಮಾಡಲು 80 ಕೋಟಿಗೆ ಅನುಮೋದನೆ ನೀಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪಂಗಡ ಹಾಗೂ ಶೇ 50, ಇತರೇ ಸಮುದಾಯದ ವಿದ್ಯಾರ್ಥಿಗಳಿಗೆ ಶೇ 50 ರಷ್ಟು ಮೀಸಲು ಇಡಲಾಗಿದೆ'' ಎಂದರು.

ದೆಹಲಿಯಲ್ಲಿ ಕಾನೂನು ವಿಭಾಗ ಸದೃಢ : ''ಸುಪ್ರೀಂ ಕೋರ್ಟಿನಲ್ಲಿರುವ ವ್ಯಾಜ್ಯಗಳ ಇತ್ಯರ್ಥಕ್ಕೆ ದೆಹಲಿಯ ಕಾನೂನು ವಿಭಾಗವನ್ನು ಮತ್ತಷ್ಟು ಸದೃಢಗೊಳಿಸಲು ಪ್ರತ್ಯೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರೆಸಿಡೆನ್ಸಿಯಲ್ ಕಮಿಷನರ್ ಕಚೇರಿ ಕಾರ್ಯವೈಖರಿ ನನಗೆ ಸಮಾಧಾನ ತಂದಿಲ್ಲ. ಆದ ಕಾರಣಕ್ಕೆ ಅದನ್ನು ಹೊಸದಾಗಿ ಸಮೀಕರಿಸಲಾಗುತ್ತಿದೆ'' ಎಂದರು.

ಕೇಂದ್ರದ ಯೋಜನೆಗಳನ್ನು ಕರ್ನಾಟಕಕ್ಕೆ ತರಲು ಅಧಿಕಾರಿಗಳ ತಂಡ ನಿಯೋಜನೆ :''ಕೇಂದ್ರದ ಯೋಜನೆಗಳನ್ನು ರಾಜ್ಯಕ್ಕೆ ತರುವುದು ಹೇಗೆ? ಯಾವ ಯೋಜನೆಗಳಿಗೆ ಅರ್ಜಿ ಸಲ್ಲಿಸಬೇಕು. ಯಾವ ಯೋಜನೆಗಳು ಇತರೇ ರಾಜ್ಯಗಳಲ್ಲಿದೆ. ತಮಿಳುನಾಡು, ಆಂಧ್ರ ಪ್ರದೇಶ, ಗುಜರಾತ್ ಸೇರಿದಂತೆ ಇತರೇ ರಾಜ್ಯಗಳು ಯಾವ ಯೋಜನೆಗಳನ್ನು ತೆಗೆದುಕೊಂಡು ಹೋಗುತ್ತಿದ್ದಾರೆ ಎಂದು ತಿಳಿಯಲು ಹೊಸ ಅಧಿಕಾರಿಗಳ ತಂಡ ರಚಿಸಿ ನೇಮಕ ಮಾಡಲಾಗುತ್ತಿದೆ'' ಎಂದರು.

''ಈಗಾಗಲೇ ದೆಹಲಿಗೆ ತೆರಳಿ ಕರ್ನಾಟಕದ ಅಧಿಕಾರಿಗಳ ಸಭೆ ನಡೆಸಿ ಅವರ ಸಲಹೆ ಪಡೆದಿದ್ದೇನೆ. ನಮ್ಮ ಅಧಿಕಾರಿಗಳು ಹಲವಾರು ಸಲಹೆ ನೀಡಿದ್ದು, ಕರ್ನಾಟಕದ ಏಳಿಗೆಗೆ ಕೆಲಸ ಮಾಡುವುದಾಗಿ ತಿಳಿಸಿದ್ದಾರೆ. ದೆಹಲಿಯಲ್ಲಿರುವ ನಮ್ಮ ಅಧಿಕಾರಿಗಳು ತಂಡಗಳನ್ನು ರಚಿಸಿಕೊಂಡು ಇಲಾಖೆಗೆ ಅನುಗುಣವಾಗಿ ಸಲಹೆ ನೀಡಲು ಮುಂದ ಬಂದಿದ್ದಾರೆ. ಇವರ ಜೊತೆಗೆ ಹಿರಿಯ ಐಎಎಸ್, ಐಪಿಎಸ್ ಅಧಿಕಾರಿಗಳು ನಿವೃತ್ತ ಅಧಿಕಾರಿಗಳನ್ನು ಈ ತಂಡಕ್ಕೆ ನೇಮಕ ಮಾಡಲಾಗಿದೆ'' ಎಂದರು.

''ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳಸಾಪೂರ ಗ್ರಾಮದಲ್ಲಿನ ಒಟ್ಟು 18 ಎಕರೆ ಜಮೀನಿನಲ್ಲಿ 50:50ರ ಅನುಪಾತದಲ್ಲಿ ರೈತರು ಹಾಗೂ ಪ್ರಾಧಿಕಾರದ ಸಹಭಾಗಿತ್ವದೊಂದಿಗೆ ರೂ.19.69 ಕೋಟಿಗಳ

3ನೇ ಪುಟಕ್ಕೆ

ಕುಡಿಯುವ ನೀರಿನ ಸಮಸ್ಯೆಗಳ ಮಾಹಿತಿ ನೀಡಿ: ಜಿಲ್ಲಾಧಿಕಾರಿ



ರಾಯಚೂರು ಜೂನ್ 20

ಜಿಲ್ಲೆಯಲ್ಲಿ ಪ್ರಸ್ತುತ ಮಳೆ ಕಡಿಮೆಯಾಗಿರುವುದರಿಂದ ಮುಂದಿನ ಜುಲೈ ಹಾಗೂ ಆಗಸ್ಟ್ ತಿಂಗಳಲ್ಲಿ ಜಿಲ್ಲೆಯ ಯಾವ ಯಾವ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗಬಹುದು ಎಂಬುದರ ಕುರಿತು ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಕೂಡಲೇ ಮಾಹಿತಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜೂನ್ 20ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ, ರಸಗೊಬ್ಬರ, ಮಳೆಹಾನಿ ಮುಂತಾದ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆಯಾ ತಾಲ್ಲೂಕಿನ ಕೆರೆಗಳಲ್ಲಿ ಎಷ್ಟು ನೀರು ಇವೆ. ಮತ್ತು ಎಷ್ಟು ದಿನಕ್ಕೆ ಆಗುವಷ್ಟು ಇವೆ. ಎನ್ನುವ ಕುರಿತು ಮಾಹಿತಿಯನ್ನು ಸಂಬಧಿಸಿದ ಅಧಿಕಾರಿಗಳು ಕೂಡಲೇ ನೀಡಬೇಕು. ಎಲ್ಲಾ ಕಾಲುವೆಗಳನ್ನು ಸರಿಯಾಗಿ ಸ್ವಚ್ಚತೆ ಮಾಡಬೇಕು. ಈ ಸಲ ಜುಲೈನಲ್ಲಿ ಡ್ಯಾಂ ನಿಂದ ನೀರು ಬಿಟ್ಟಾಗ ಮೈಲ್ ನಿಂದ ಮೈಲಿಗೆ ತಂಡಗಳನ್ನು ಮಾಡಿ ನೀರನ್ನು ಸರಿಯಾದ ರೀತಿಯಲ್ಲಿ ತಲುಪಿಸುವ ನೀರಾವರಿ ಇಲಾಖೆಯ ಪಾತ್ರ ಬಹಳ ಮಹತ್ವದಾಗಿದೆ. ಈ ವರ್ಷ ತುಂಗಭದ್ರಾ ಡ್ಯಾಂನಲ್ಲಿ ಕಳೆದ ವರ್ಷಕ್ಕಿಂತ ನೀರು ಈಗ ಕಡಿಮೆ ಇದೆ ಎಂದು ಹೇಳಿದರು.

ಸಭೆಯಲ್ಲಿ 2026-27ನೇ ಸಾಲಿನ ಕೃಷಿ ಚಟುವಟಿಕೆಗಳ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆಯಾಗದಂತೆ ಕೃಷಿ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕು. ಆಯಾ ತಾಲ್ಲೂಕಿನ ರಸಗೊಬ್ಬರ ಅಂಗಡಿಗಳಿಗೆ ಕೃಷಿ ಅಧಿಕಾರಿಗಳು ಭೇಟಿ ನೀಡಿ ಅಲ್ಲಿನ ಬೀಜ ಹಾಗೂ ರಸಗೊಬ್ಬರ ಮಾಹಿತಿ ಪಡೆಯಬೇಕು. ಪಂಚಾಯತ ವ್ಯಾಪ್ತಿಯಲ್ಲಿ ರೈತರಿಗೆ ಇನ್ಸೂರೆನ್ಸ ಮಾಡಿಸುವ ಕುರಿತು ಅವರಿಗೆ ಮಾಹಿತಿ ನೀಡಬೇಕು. ಮತ್ತು ಜಿಲ್ಲೆಯಲ್ಲಿ ಬರುವ ದಿನಗಳಲ್ಲಿ ಯಾವುದೇ ರೀತಿಯಲ್ಲಿ ಮಳೆ ಹಾನಿಯಾದರೆ ತಕ್ಷಣವೇ ಕ್ರಮವಹಿಸಬೇಕೆಂದು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಇನ್ನೂ ಜಿಲ್ಲೆಯ ಸುಮಾರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಖಾಸಗಿ ಬೋರವೆಲ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಟಾಸ್ಕಫೋರ್ಸ್ ಅನುದಾನ ರಿಲೀಸ್ ಆಗಿರುವುದರಿಂದ ಯಾವುದೇ ಕುಡಿಯುವ ನೀರಿನ ಬಿಲ್ ಬಾಕಿ ಇರಬಾರದು ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿ ಟಾಸ್ಕಫೋರ್ಸ ಸಭೆಗಳನ್ನು ಮಾಡಬೇಕು. ತಮ್ಮ ಟಾಸ್ಕಫೋರ್ಸ ಪ್ರೊಗ್ರಸ್ ಬಹಳ ಕಡಿಮೆ ಇದೆ. ಸುಮಾರು ಪಂಚಾಯತಿ ವ್ಯಾಪ್ತಿಗಳಲ್ಲಿ ಟಿ.ಸಿ ಮತ್ತು ಮೋಟರ್ ಸುಟ್ಟು ಹೋಗಿವೆ. ಎಂಬ ದೂರುಗಳಿದ್ದು, ಅವುಗಳು ಸರಿಯಾಗಿ ರಿಪೇರಿಯಾಗುತ್ತಿಲ್ಲ. ಜೆಸ್ಕಾಂ ಅಧಿಕಾರಿಗಳು ಈ ಕುರಿತು ಗಮನಗರಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ರಾಯಚೂರು ವಿಭಾಗದ ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಲಿಂಗಸಗೂರು ವಿಭಾಗದ ಸಹಾಯಕ ಆಯುಕ್ತ ಬಸವೇಣ್ಣಪ್ಪ ಕಲಶೆಟ್ಟಿ, ಅರಣ್ಯ ಇಲಾಖೆ ಜಿಲ್ಲಾ ಅಧಿಕಾರಿ ಪ್ರವೀಣ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವಣ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ರಾಯಚೂರು ಮಹಾನಗರ ಪಾಲಿಕೆಯ ಸದಸ್ಯ ಕಾರ್ಯದರ್ಶಿ ಕೃಷ್ಣ ಸೇರಿದಂತೆ ವಿವಿಧ ತಾಲೂಕಿನ ತಹಶೀಲ್ದರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರೊಂದಿಗೆ ಸಂವಾದ

ಅಧಿಕಾರಿಗಳು ಕಾಲಮಿತಿಯೊಳಗೆ ಮಾಹಿತಿ ಒದಗಿಸಿ: ಆಯುಕ್ತ ಬಿ.ವೆಂಕಟ ಸಿಂಗ್

ರಾಯಚೂರು ಜೂ.20

ಭ್ರಷ್ಟಾಚಾರ ನಿವಾರಣೆಗಾಗಿ ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ತರಲಾಗಿದೆ. ಇದರಡಿ ಮಾಹಿತಿ ಕೋರಿ ಸಲ್ಲಿಕೆಯಾಗುವ ಅರ್ಜಿಗಳಿಗೆ ಕಾಲಮಿತಿಯೊಳಗೆ ಮಾಹಿತಿ ಒದಗಿಸುವುದು ಸಾರ್ವಜನಿಕ ಮಾಹಿತಿ ಅಧಿಕಾರಿ ಕರ್ತವ್ಯವಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಹೇಳಿದರು.



ಜೂನ್ 20ರ ಶನಿವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ರಾಯಚೂರು ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರೊಂದಿಗೆ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾಹಿತಿ ಹಕ್ಕು ಕಾಯ್ದೆಯಡಿ ಯಾವುದೇ ಅಧಿಕಾರಿ ಮತ್ತು ಸಿಬ್ಬಂದಿಗಳ ವೈಯಕ್ತಿಕ ಮಾಹಿತಿ ನೀಡಲು ಬರುವುದಿಲ್ಲ. ಸಾರ್ವಜನಿಕ ಹಿತಾಸಕ್ತಿಗೆ ಪೂರಕವಾದ ಅರ್ಜಿಗಳಿದ್ದರೆ ಮಾಹಿತಿ ನೀಡಬೇಕು. ಯಾವುದೇ ಅಧಿಕಾರಿ ಸಮಂಜಸ ಕಾರಣವಿಲ್ಲದೆ ಮಾಹಿತಿ ನೀಡದರೆ ಅಥವಾ ದುರುದ್ದೇಶದಿಂದ ತಪ್ಪಾಗಿ ಮಾಹಿತಿ ಕೊಟ್ಟರೆ ದಂಡ ಪಾವತಿಸಬೇಕಾಗುತ್ತದೆ ಜತೆಗೆ ಶಿಸ್ತುಕ್ರಮ ಎದುರಿಸಬೇಕಾ ಗುತ್ತದೆ ಎಂದರು.

ಸವಿಧಾನದ ವಿಧಿ 19ರಲ್ಲಿ ಸಂಸತ್ತಿನ ಉಭಯ ಸದನಗಳಲ್ಲಿ ಮಾಹಿತಿ ಹಕ್ಕು ಕಾಯ್ದೆ ಜಾರಿಯಾಗಿ 20 ವರ್ಷಗಳಾಗಿದ್ದು, ಅದೇ ವರ್ಷ ಕರ್ನಾಟಕದಲ್ಲಿ ಮಾಹಿತಿ ಹಕ್ಕು ಕಾಯ್ದೆ ಜಾರಿಯಾಗಿದ್ದು, ಅದರ ಕಾಯ್ದೆಯ ಅಂಶಗಳನ್ನು ಅಧಿಕಾರಿಗಳು ಸರಿಯಾಗಿ ತಿಳಿಯದ ಕಾರಣ, ಮಾಹಿತಿ ಕೊರತೆಯಿಂದ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ರಕರಣಗಳ ಬಾಕಿ ಉಳಿದಿವೆ ಎಂದರು.

ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ ನಡೆಸಲಾಗಿದೆ. ರಾಯಚೂರು ಜಿಲ್ಲೆಯಲ್ಲಿ ಸುಮಾರು 2 ಸಾವಿರಕ್ಕೂ ಹೆಚ್ಚು ಪ್ರಕರಣಗಳ ಬಾಕಿವೆ. ನಿಗದಿ ಕಾಲದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಹಿತಿ ನೀಡಲು

3ನೇ ಪುಟಕ್ಕೆ

ಆಹಾರ ಇಲಾಖೆಯಿಂದ ರೈತರ ಖಾತೆಗೆ ಜೋಳ ಖರೀದಿ ಹಣ ಜಮೆ

ರಾಯಚೂರು ಜೂನ್ 20

ರಾಯಚೂರಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವತಿಯಿಂದ 2025-26ನೇ ಸಾಲಿನ ಕನಿಷ್ಠ ಬೆಂಬಲ ಯೋಜನೆಯಡಿ ಜೋಳವನ್ನು ಸರಬರಾಜು ಮಾಡಿದ ರೈತರ ಖಾತೆಗೆ ಹಣವನ್ನು ಜಮೆ ಮಾಡಲಾಗುತ್ತಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಯಚೂರು ಜಿಲ್ಲೆಯಾದ್ಯಂತ ಒಟ್ಟು 36 ಜೋಳ ಖರೀದಿ ಕೇಂದ್ರಗಳ ಮೂಲಕ ಮುಂಗಾರು

3ನೇ ಪುಟಕ್ಕೆ

ಪಾರ್ವತಮ್ಮ ನಿಧನ ಹಿನ್ನೆಲೆ: ಮುಂಗಾರು ನಾಡಹಬ್ಬ ತಾತ್ಕಾಲಿಕ ಮುಂದೂಡಿಕೆ

ರಾಯಚೂರು,ಜೂ.20-

ಮುನ್ನೂರು ಸಮುದಾಯದ ಹಿರಿಯ ಮುಖಂಡರು ಹಾಗೂ ಮಾಜಿ ಶಾಸಕ . ಅವರ ಧರ್ಮಪತ್ನಿ ಪಾರ್ವತಮ್ಮ ಅವರ ನಿಧನದ ಹಿನ್ನೆಲೆಯಲ್ಲಿ ಆಯೋಜಿಸಲಾಗಿದ್ದ ಮುಂಗಾರು ಸಾಂಸ್ಕೃತಿಕ ರಾಯಚೂರು ನಾಡಹಬ್ಬವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ಮುನ್ನೂರು ಕಾಪು ಸಮಾಜದ ಕಾರ್ಯಾಧ್ಯಕ್ಷ ಕೃಷ್ಣಮೂರ್ತಿ ಉಟ್ಕೂರ್ ತಿಳಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಹಬ್ಬದ ಪ್ರಮುಖ ಪ್ರೇರಕ ಹಾಗೂ ಕೇಂದ್ರಬಿಂದುವಾಗಿರುವ ಮಾಜಿ ಶಾಸಕ ಎ. ಪಾಪಾರೆಡ್ಡಿ ಅವರು ಪತ್ನಿಯ ನಿಧನದ ಹಿನ್ನೆಲೆಯಲ್ಲಿ ಸಂಪ್ರದಾಯ ಮತ್ತು ಕುಟುಂಬದ ಆಚರಣೆಗಳ ಅನ್ವಯ ಮೂರು ತಿಂಗಳ ಕಾಲ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಿಲ್ಲ ಎಂದು ತಿಳಿಸಿದರು. ಈ ಕಾರಣದಿಂದ ಹಬ್ಬದ ನಿಗದಿತ ದಿನಾಂಕವನ್ನು ಮುಂದೂಡಲಾಗಿದ್ದು, ಹೊಸ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಹೇಳಿದರು.

ಬಳಿಕ ಮಾತನಾಡಿದ ಶ್ರೀನಿವಾಸರೆಡ್ಡಿ, ಮುಂಗಾರು ನಾಡಹಬ್ಬವು ಜಿಲ್ಲೆಯ ಸಾಂಸ್ಕೃತಿಕ ಪರಂಪರೆ, ಸ್ಥಳೀಯ ಕಲಾ ವೈಭವ ಮತ್ತು ಸಾಮಾಜಿಕ ಬಾಂಧವ್ಯವನ್ನು ಪ್ರತಿಬಿಂಬಿಸುವ ಮಹತ್ವದ ವೇದಿಕೆಯಾಗಿದೆ. ಮುಂದಿನ ದಿನಗಳಲ್ಲಿ ಈ ಕಾರ್ಯಕ್ರಮವನ್ನು ಇನ್ನಷ್ಟು ವಿಜೃಂಭಣೆಯಿಂದ ಹಾಗೂ ಹೆಚ್ಚಿನ ಜನಸಹಭಾಗಿತ್ವದೊಂದಿಗೆ ಆಯೋಜಿಸಲಾಗುವುದು ಎಂದು ತಿಳಿಸಿದರು.

ಪಾರ್ವತಮ್ಮ ಅವರು ಸಮಾಜಮುಖಿ ಚಟುವಟಿಕೆಗಳು ಮತ್ತು ಸಮುದಾಯ ಸೇವೆಗಳ ಮೂಲಕ

3ನೇ ಪುಟಕ್ಕೆ

ವಿಕಸಿತ್ ಭಾರತ್ ರೋಜ್ ಗಾರ್ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ

ವಿಶ್ವವು ಭಾರತೀಯ ಯುವಕರ ಸಾಮರ್ಥ್ಯ ಗುರುತಿಸುತ್ತಿದೆ: ನರೇಂದ್ರ ಮೋದಿ

ರಾಯಚೂರು ಜೂ.20

ಭಾರತದ ಯುವಕರ ಪ್ರತಿಭೆ, ಕೌಶಲ್ಯ ಮತ್ತು ಸಾಮರ್ಥ್ಯಕ್ಕಾಗಿ ಜಾಗತಿಕವಾಗಿ ಅಭೂತಪೂರ್ವ ಮನ್ನಣೆ ದೊರೆಯುತ್ತಿದೆ. ವಿಶ್ವವು ಭಾರತೀಯ ಯುವಕರ ಸಾಮರ್ಥ್ಯವನ್ನು ಹೆಚ್ಚು ಹೆಚ್ಚು ಗುರುತಿಸುತ್ತಿದೆ ಎಂದು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಹೇಳಿದರು.

ಜೂನ್ 19ರ ಶುಕ್ರವಾರ ದಂದು ನವ ದೆಹಲಿಯ ವಿಜ್ಞಾನ್ ಭವನದ ಸಭಾಂಗಣದಿದ ನಡೆದ ಪ್ರಧಾನ ಮಂತ್ರಿ ವಿಕಸಿತ್ ಭಾರತ್ ರೋಜ್ ಗಾರ್ ಯೋಜನೆಯ ಫಲಾನುಭವಿಗಳು, ಉದ್ಯಮದ ಪ್ರತಿನಿಧಿಗಳು ಮತ್ತು ಪಾಲುದಾರರೊಂದಿಗೆ ವರ್ಚುವಲ್ ವೇದಿಕೆ ಮೂಲಕ ಸಂವಾದ ನಡೆಸಿ, ಅವರು ಮಾತನಾಡಿದರು.

ಪ್ರತಿಯೊಬ್ಬ ಯುವಕನಿಗೂ ತನ್ನ ಸಾಮರ್ಥ್ಯವನ್ನು ಯಶಸ್ಸನ್ನಾಗಿ ಪರಿವರ್ತಿಸಲು ಅವಕಾಶ ಸಿಗುವಂತೆ ಮಾಡಲು ಸರ್ಕಾರ ಬದ್ಧವಾಗಿದೆ. ಪ್ರಧಾನ ಮಂತ್ರಿ ವಿಕಸಿತ್ ಭಾರತ್ ರೋಜ್ ಗಾರ್ ಯೋಜನೆಯು ಒಂದು ಉದ್ಯೋಗ ಯೋಜನೆಗಿಂತಲೂ ಮಿಗಿಲಾದದ್ದಾಗಿದೆ. ಮೊದಲ ಉದ್ಯೋಗಕ್ಕೆ ಸೇರುತ್ತಿರುವ ಯುವಜನರ ಆಕಾಂಕ್ಷೆಗಳನ್ನು ಬಲಪಡಿಸಲು ಹಾಗೂ ಉದ್ಯಮ



ಮತ್ತು ಉದ್ಯೋಗಿಗಳ ನಡುವೆ ದೃಢವಾದ ಸೇತುವೆಯನ್ನು ನಿರ್ಮಿಸಲು ರೂಪಿಸಲಾದ ಈ ಯೋಜನೆಯ ಒಂದು ಉಪಕ್ರಮವಾಗಿದೆ ಎಂದರು.

ಅನೇಕ ಯೋಜನೆಗಳು ಸಾಮಾನ್ಯವಾಗಿ ಉದ್ಯೋಗಿಗಳು ಅಥವಾ ಉದ್ಯೋಗದಾತರ ಮೇಲೆ ಮಾತ್ರ ಗಮನ ಕೇಂದ್ರೀಕರಿಸುತ್ತವೆ. ಆದರೆ ಈ ಕಾರ್ಯಕ್ರಮವು ಏಕಕಾಲದಲ್ಲಿ ಇಬ್ಬರಿಗೂ ಬೆಂಬಲ ನೀಡುತ್ತದೆ. ತಮ್ಮ ವೃತ್ತಿಪರ ಪ್ರಯಾಣವನ್ನು ಪ್ರಾರಂಭಿಸುತ್ತಿರುವ ಯುವಜನರೊಂದಿಗೆ ಸರ್ಕಾರ ನಿಲ್ಲುತ್ತದೆ ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತದೆ ಎಂದರು.

ಸುಮಾರು 70 ಲಕ್ಷ ಹೊಸ ಉದ್ಯೋಗಗಳನ್ನು ಸೃಷ್ಟಿಸಲಾಗಿದೆ. ಮತ್ತು ಅಷ್ಟೇ ಸಂಖ್ಯೆಯ ಮೊದಲ ಬಾರಿಯ ಉದ್ಯೋಗಿಗಳನ್ನು ಸಾಮಾಜಿಕ ಭದ್ರತೆಯ ವ್ಯಾಪ್ತಿಗೆ ತರಲಾಗಿದೆ. ಸುಮಾರು 20 ಲಕ್ಷ ಯುವಕರು ತಮ್ಮ ಮೊದಲ ಉದ್ಯೋಗದಲ್ಲಿ ಆರು ತಿಂಗಳುಗಳನ್ನು ಪೂರೈಸಿದ್ದಾರೆ, ಹಾಗೆಯೇ ಸುಮಾರು 10 ಲಕ್ಷ ಫಲಾನುಭವಿಗಳು ಈ ಮೈಲಿಗಲ್ಲನ್ನು ಪೂರೈಸಿದ ನಂತರ ಯೋಜನೆಯ ಅಡಿಯಲ್ಲಿ ಈಗಾಗಲೇ ಪ್ರೋತ್ಸಾಹಕಗಳನ್ನು ಪಡೆದಿದ್ದಾರೆ ಎಂದು ಅವರು ಉಲ್ಲೇಖಿಸಿದರು.

2,000 ಕೋಟಿ ರೂ.ಗೂ ಹೆಚ್ಚು ಮೊತ್ತವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗಿದೆ. ಈ ಬೆಂಬಲವನ್ನು ಕೇವಲ ಆರ್ಥಿಕ ನೆರವಿಗಿಂತಲೂ ಮಿಗಿಲಾದದ್ದು, ಇದು ಯುವಜನರ ಕಠಿಣ ಪರಿಶ್ರಮಕ್ಕೆ ದೇಶ ನೀಡುವ ಮನ್ನಣೆ ಮತ್ತು ಅವರ ಭವಿಷ್ಯದ ಮೇಲಿರುವ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ. ಸರ್ಕಾರ, ಉದ್ಯಮ ಮತ್ತು ಯುವಜನರು ಒಟ್ಟಾಗಿ ಕೆಲಸ ಮಾಡಿದಾಗ ಉದ್ಯೋಗ ಸೃಷ್ಟಿಯು ವೇಗವನ್ನು ಪಡೆಯುತ್ತದೆ. ಯುವಜನರಿಗೆ ಅವಕಾಶಗಳು ದೊರೆಯುವ, ಕೈಗಾರಿಕೆಗಳಿಗೆ

ಮೂರನೇಯ ಪುಟಕ್ಕೆ



ಅದ್ದೂರಿಯಾಗಿ ನಡೆದ ಹಿರೇಜಂತಕಲ್ ಅಂಗನವಾಡಿ ಕೇಂದ್ರದ ಮಕ್ಕಳ ಘಟಿಕೋತ್ಸ ವ

ಕೊಪ್ಪಳ ಜೂ.20-

ಗಂಗಾವತಿ ನಗರದ ಹಿರೇಜಂತಕಲ್ ಮೂರನೇ ಅಂಗನವಾಡಿ ಕೇಂದ್ರದಲ್ಲಿ ಶಾಲಾ ಪೂರ್ವ ಶಿಕ್ಷಣವನ್ನು ಮುಗಿಸಿ ಪ್ರಾಥಮಿಕ ಶಾಲೆಗೆ ಪ್ರವೇಶಿಸಿದ ಮಕ್ಕಳಿಗೆ ಬೀಳ್ಕೊಡುಗೆ ಮತ್ತು ಘಟಿಕೋತ್ಸ ವ ಕಾರ್ಯಕ್ರಮವನ್ನು ಅತ್ಯಂತ ಸುಂದರವಾಗಿ ಹಮ್ಮಿಕೊಳ್ಳಲಾಯಿತು.

ಮಕ್ಕಳು ಅಂಗನವಾಡಿಯಲ್ಲಿ ಮೂರು ವರ್ಷಗಳ ಕಾಲ ಶಾಲಾ ಪೂರ್ವ ಶಿಕ್ಷಣವನ್ನು ಕಲಿತ ವಿಷಯಗಳ ಕುರಿತು ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಸ್ವಾತಂತ್ರ್ಯ ಹೋರಾಟಗಾರರ ಚಿತ್ರಗಳು, ಜ್ಞಾನ ಪೀಠ ಪ್ರಶಸ್ತಿ ಪುರಸ್ಕೃತರ ಮಾಹಿತಿ, ವಿವಿಧ ಕರೆನ್ಸಿ ನೋಟುಗಳ ಕುರಿತು, ವೃತ್ತಿಗಳ ಕುರಿತು, ಹವಾಮಾನ ಬದಲಾವಣೆ ಕುರಿತು, ಪರಿಸರ ಕಾಳಜಿಯ ಕುರಿತು ಇನ್ನು ಅನೇಕ ವಿಷಯಗಳ ಕುರಿತು ಏರ್ಪಡಿಸಲಾಗಿದ್ದ ವಸ್ತು ಪ್ರದರ್ಶನದಲ್ಲಿ ಒಂದೊಂದು ವಿಷಯದ ಕುರಿತು ಸ್ವತಃ ಮಕ್ಕಳೇ ಚಿತ್ರ ತೋರಿಸುತ್ತಾ ತನ್ನ ತೊದಲು ನುಡಿಯಲ್ಲಿ ವಿವರಣೆ ಕೊಡುತ್ತಿರುವದು ಅದ್ಭುತವಾಗಿತ್ತು. ಮಕ್ಕಳ ವಿವರಣೆ , ಪ್ರತಿಭೆಯನ್ನು ಕಂಡು ಹಾಜರಿದ್ದ ಅಧಿಕಾರಿಗಳು, ಪೋಷಕರು ತುಂಬಾ ಸಂತೋಷ ಪಟ್ಟರು.

ನಂತರ ನಡೆದ ಘಟಿಕೋತ್ಸ ವ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಅಮರೇಶ್ ಹಾವಿನ್ ಅವರು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ವಿಜಯನಗರ ಜಿಲ್ಲೆಯ ಉಪನಿರ್ದೇಶಕರಾದ ಗಂಗಪ್ಪ ಅವರು ಉಪಸ್ಥಿತರಿದ್ದರು.

ಮಕ್ಕಳಿಗೆ ವಿಶ್ವವಿದ್ಯಾಲಯದಲ್ಲಿ ನಡೆಯುವ ಘಟಿಕೋತ್ಸ ವ ಮಾದರಿಯಲ್ಲಿ ಪದವಿ ಪ್ರಧಾನ ಮಾಡಿರುವದು ವಿನೂತನವಾಗಿತ್ತು, ಘಟಿಕೋತ್ಸ ವದ ಉಡುಗೆಯಲ್ಲಿ ಪ್ರಮಾಣ ಪತ್ರವನ್ನು ಸ್ವೀಕರಿಸಿದ ಮಕ್ಕಳನ್ನು ಕಂಡು ಪೋಷಕರು ತುಂಬಾ ಸಂತೋಷ ಪಟ್ಟರು. ಇಂತಹ ಒಂದು ವಿನೂತನ ಕಾರ್ಯಕ್ರಮ ನಡೆಯಲು ಕಾರಣರಾದ ಕೇಂದ್ರದ ಕಾರ್ಯಕರ್ತರಾದ ಸುನೀತಾ ಅವರನ್ನು ಉಪನಿರ್ದೇಶಕರಾದ ಅಮರೇಶ್ ಅವರು ಅಭಿನಂದಿಸಿದರು. ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಈ ರೀತಿಯಾಗಿ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳು ನಿರಂತರವಾಗಿ, ಪರಿಣಾಮಕಾರಿಯಾಗಿ ನಡೆದಲ್ಲಿ ಅಂಗನವಾಡಿಯ ಕಡೆ ಪೋಷಕರು ಮಕ್ಕಳನ್ನು ದಾಖಲಿಸಲು ಮುಂದಾಗುತ್ತಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿಡಿಪಿಒ ಶರಣಪ್ಪ ಗದ್ದಿ, ಶಾಲಾ ಮುಖ್ಯ ಶಿಕ್ಷಕರು, ಕಲಿಕೆ ಟ್ರಸ್ಟ್ ವ್ಯವಸ್ಥಾಪಕ ಅಶೋಕ, ಸಿದ್ದಪ್ಪ ಕುರಿ, ಮೇಲ್ವಿಚಾರಕರಾದ ವಿದ್ಯಾವತಿ, ಶರಣಮ್ಮ, ಈರಮ್ಮ, ಅಂಗನವಾಡಿ ಶಿಕ್ಷಕರು, ಸಹಾಯಕಿಯರು ಹಾಗೂ ಪೋಷಕರು ಉಪಸ್ಥಿತರಿದ್ದರು.

ಕುವೆಂಪು ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ: ಮಲೇರಿಯಾ ವಿರೋಧಿ ಮಾಸಾಚರಣೆ

ಕೊಪ್ಪಳ ಜೂ.20-

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಕೊಪ್ಪಳ ನಗರ ಪ್ರದೇಶದ ಕುವೆಂಪು ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ (ಜೂ. 18ರಂದು) ''ಮಲೇರಿಯಾ ವಿರೋಧಿ ಮಾಸಾಚರಣೆ'' ಜಾಗೃತಿ ಕಾರ್ಯಕ್ರಮ ನಡೆಯಿತು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಕಾರ್ಯಕ್ರಮ ಕುರಿತು ಮಾತನಾಡಿ, ಪ್ರತಿ ವರ್ಷ ಜೂನ್ ತಿಂಗಳಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಕಾರ್ಯಕ್ರವನ್ನು ಆಚರಿಸಲಾಗುತ್ತದೆ. ಇದರ ಉದ್ದೇಶ ಜೂನ್ ತಿಂಗಳಲ್ಲಿ ಮಳೆಗಾಲ ಪ್ರಾರಂಭವಾಗುವುದರಿದ ನಿಂತ ನೀರಿನಲ್ಲಿ ಸೋಂಕಿತ ಸೊಳ್ಳೆಗಳು ಹೆಚ್ಚಾಗಿ ಮನುಷ್ಯರಿಗೆ ಒಬ್ಬರಿಂದ ಇನ್ನೊಬ್ಬರಿಗೆ ಕಚ್ಚುವುದರಿಂದ ಮಲೇರಿಯಾ ರೋಗ ಹರಡುತ್ತದೆ. ಇದರ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಉದ್ದೇಶದಿಂದ ಈ ಜಾಗೃತಿ ಕಾರ್ಯಕ್ರಮ ಆಚರಿಸಲಾಗುತ್ತದೆ. ಸೋಂಕಿತ ಅನಾಫಿಲಿಸ್ ಹೆಣ್ಣು ಸೊಳ್ಳೆಗಳು ನೀರಿನಲ್ಲಿ ಮೊಟ್ಟೆಗಳನ್ನಿಟ್ಟು ಸಂತಾನಾಭಿವೃದ್ಧಿ ಮಾಡುತ್ತವೆ. ಮೊಟ್ಟೆಗಳ ಬೆಳವಣಿಗೆಗಾಗಿ ಮನುಷ್ಯನಿಗೆ ಕಚ್ಚುವುದರಿಂದ ಖಾಯಿಲೆ ಹರಡುತ್ತದೆ. ಈ ರೋಗದ ಲಕ್ಷಣಗಳು ತಲೆನೋವು, ವಾಂತಿ, ವಿಪರೀತ ಚಳಿಜ್ವರ, ಮೈನಡಕ ಲಕ್ಷಣಗಳಿದ್ದರೆ ತಕ್ಷಣ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಗೆ ಬೇಟಿನೀಡಿ ಅಥವಾ ಆರೋಗ್ಯ ಸಿಬ್ಬಂದಿಗಳ ಜೊತೆ ರಕ್ತ ಪರೀಕ್ಷೆ ಮಾಡಿಸಿ, ಖಚಿತ ಪಟ್ಟರೆ ಉಚಿತ ಚಿಕಿತ್ಸೆ ನೀಡಲಾಗುತ್ತದೆ. ಯಾವುದೇ ಕಾರಣಕ್ಕೂ ಜ್ವರದ ಬಗ್ಗೆ ನಿರ್ಲಕ್ಷ ಮಾಡಬಾರದೆಂದು ತಿಳಿಸಿದರು.

''ಮಲೇರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ:ನಮಗಿದು ಸಾಧ್ಯವಿದೆ, ನಾವು ಇದನ್ನು ಮಾಡಲೇಬೇಕು'' ಎಂಬ ಈ ವರ್ಷದ ಘೋಷ್ಯವಾಕ್ಯದೊಂದಿಗೆ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತದೆ. ಇದರ



ನಿಯಂತ್ರಣಕ್ಕಾಗಿ ತಮ್ಮ ಮನೆಯ ಸುತ್ತ-ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಸಾಯಂಕಾಲ ವೇಳೆ ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಸೊಳ್ಳೆ ಕಡಿತದಿಂದ ದೂರವಿರಲು ವೈಯಕ್ತಿಕ ರಕ್ಷಣೆ ಮಾಡಿಕೊಳ್ಳಬೇಕು. ''ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ'' ಮನೆಯಲ್ಲಿ ನೀರು ಶೇಖರಣ ತೊಟ್ಟಿಗಳಲ್ಲಿ ಸೊಳ್ಳೆಗಳು ಮೊಟ್ಟೆಗಳನ್ನಿಟ್ಟು ಸಂತಾನಭಿವೃದ್ಧಿ ಮಾಡುತ್ತವೆ. ಲಾರ್ವಾ ನಾಶಕ್ಕಾಗಿ ಸ್ವಚ್ಛಗೊಳಿಸತ್ತಿರಬೇಕು. ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಮನೆಬೇಟಿ ನೀಡಿದಾಗ ಸಹಕರಿಸಿ, ರಕ್ತಲೇಪನ ನೀಡಿ, ಡೆಂಗ್ಯೂ ಖಾಯಿಲೆಯನ್ನು ತಡೆಗಟ್ಟುವ ಸಲುವಾಗಿ ಈಡಿಸ್ ಸೊಳ್ಳೆ ಉತ್ಪತ್ತಿ ರಹೀತ ಶಾಲಾ ಆವರಣ ಮಾಡುವುದು ಅವಶ್ಯವಾಗಿರುತ್ತದೆ ಎಂದು ಹೇಳಿದರು. ಶಾಲಾ ಮುಖ್ಯೋಪಾಧ್ಯಾಯರಾದ ಹೆಚ್.ಎಂ ಹನುಮಂತಪ್ಪ ತಳವಾರ ಅವರು ತಮ್ಮ ಅಧ್ಯಕ್ಷರ ಭಾಷಣದಲ್ಲಿ ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಹೇಳಿದರು.

ಸಹ ಶಿಕ್ಷಕರಾದ ಮಂಜುಳಾ ಅವರ ಎಲ್ಲರನ್ನು ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಅನಿತಾ, ನೌಶಾದಬೇಗಂ, ಪೂರ್ಣಿಮಾ ಸೇರಿದಂತೆ ಸಹ ಶಿಕ್ಷಕರು ಆಶಾಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಶೈಕ್ಷಣಿಕ ಸಾಧನೆ ಜೊತೆಗೆ ಕ್ರೀಡೆಯಲ್ಲೂ ಸಕ್ರಿಯರಾಗಿ : ಡಾ.ಎಚ್.ಕೊಟ್ರೇಶ್

ಸಂಡೂರು/ವಿಜಯನಗರ,ಜೂ.20-

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದಲ್ಲಿ ವಾರ್ಷಿಕ ಕ್ರೀಡಾ ಚಟುವಟಿಕೆಗಳ ಅಂಗವಾಗಿ ಆಯೋಜಿಸಲಾದ ಡೈರೆಕ್ಟರ್ ಕಪ್2026 ಕ್ರೀಡಾಕೂಟಕ್ಕೆ ಗುರುವಾರ ಭವ್ಯ ಚಾಲನೆ ನೀಡಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ.ಎಚ್. ಕೊಟ್ರೇಶ್, ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆಗಳ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ತಮ್ಮ ವ್ಯಕ್ತಿತ್ವವನ್ನು ಸಮಗ್ರವಾಗಿ ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಕ್ರೀಡೆಗಳು ಆತ್ಮವಿಶ್ವಾಸ, ಶಿಸ್ತು ಹಾಗೂ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸುವ ಅತ್ಯುತ್ತಮ ಸಾಧನವಾಗಿವೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಡಾ. ಶಶಿಧರ್ ಕೆಲ್ಲೂರ್ ಮಾತನಾಡಿ, ಪ್ರತಿದಿನ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಲು ಸಾಧ್ಯವಾಗುತ್ತದೆ. ಕ್ರೀಡೆಗಳು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಸದೃಢತೆಯನ್ನು ಹೆಚ್ಚಿಸಿ, ನಾಯಕತ್ವ ಗುಣ ಹಾಗೂ ತಂಡದ ಮನೋಭಾವವನ್ನು ಬೆಳೆಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಪ್ರೊ. ತಿಪ್ಪೇಸ್ವಾಮಿ, ವಿದ್ಯಾರ್ಥಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಬೇಕು ಹಾಗೂ ಜೀವನದಲ್ಲಿ ಸಾಧನೆಯ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಕ್ರೀಡಾ ಮನೋಭಾವ, ಆರೋಗ್ಯ ಜಾಗೃತಿ ಹಾಗೂ ಸೌಹಾರ್ದತೆಯನ್ನು ಬೆಳೆಸುವ ಉದ್ದೇಶದಿಂದ ಆಯೋಜಿಸಲಾದ ಡೈರೆಕ್ಟರ್ ಕಪ್2026ರ ಅಂಗವಾಗಿ ಮುಂದಿನ ದಿನಗಳಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ. ರ್ಯಕ್ರಮದ ನಿರೂಪಣೆಯನ್ನು ಡಾ. ಹೊನ್ನೂರಪ್ಪ ನಿರ್ವಹಿಸಿದರು. ಡಾ. ನರಸಿಂಹಮೂರ್ತಿ ಸ್ವಾಗತಿಸಿದರು ಹಾಗೂ ಡಾ. ವಿರೂಪಾಕ್ಷಪ್ಪ ವಂದಿಸಿದರು.

ಈ ಸಂದರ್ಭದಲ್ಲಿ ಕ್ರೀಡಾ ನಿರ್ದೇಶಕರಾದ ಶಿವರಾಮಪ್ಪ ರಾಗಿ, ಕ್ರೀಡಾ ಸಹಾಯಕರಾದ ಪಾಪಯ್ಯ, ವಿವಿಧ ವಿಭಾಗಗಳ ಸಂಯೋಜಕರು, ಅಧ್ಯಾಪಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ವಿಜಯನಗರ ಕಾಲೋನಿಯಲ್ಲಿ ಮಕ್ಕಳ ಹಕ್ಕುಗಳು, ಕಾನೂನು ಸುರಕ್ಷತೆಯ ಜಾಗೃತಿ

ಕೊಪ್ಪಳ ಜೂ.20-

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ಭಾಗ್ಯನಗರದ ವಿಜಯನಗರ ಕಾಲೋನಿಯಲ್ಲಿ ಮಂಗಳವಾರ (ಜೂ. 16ರಂದು) ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರೀವಿಕ್ಷಣಾಧಿಕಾರಿಗಳಾದ ಶಿವಲೀಲಾ ವನ್ನೂರು ಅವರು ಮಾತನಾಡಿ, ಮಕ್ಕಳೆಂದರೆ ಹೆಣ್ಣಿರಲಿ ಗಂಡು ಇರಲಿ 18 ವರ್ಷದೊಳಗಿನವರನ್ನು ನಾವು ಮಕ್ಕಳೆಂದು ಕರೆಯುತ್ತೇವೆ. ಮಕ್ಕಳ ನಡುವೆ ಎಂತಹದ್ದೇ ಕಾರಣಕ್ಕೂ ತಾರತಮ್ಯ ಮಾಡದಂತೆ ಹಾಗೂ ಮಕ್ಕಳಲ್ಲಿ ಕೀಳರಿಮೆಯನ್ನು ಉಂಟುಮಾಡದಂತೆ ಎಲ್ಲ ವಯಸ್ಕರು ಎಚ್ಚರವಹಿಸಬೇಕು. ಹುಟ್ಟಿದ ಎಲ್ಲ ಮಕ್ಕಳು ಆರೋಗ್ಯದಿಂದ ಜೀವಿಸುವ ಮತ್ತು ಬೆಳೆಯುವ ಹಕ್ಕನ್ನು ಸ್ವಾಭಾವಿಕವಾಗಿ ಹೊಂದಿದ್ದಾರೆ. ಹಿರಿಯರು ಮಕ್ಕಳ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಪ್ರತಿಯೊಂದು ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದರು.

ಮಕ್ಕಳು ಮತ್ತು ಮಹಿಳೆಯರು ಭಿಕ್ಷಾಟನೆಗೆ ತೆರಳದಂತೆ ಕುಟುಂಬ ಹಾಗೂ ಸ್ಥಳಿಕರು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕು.



ಸರ್ಕಾರದಿಂದ ಮಹಿಳೆಯರಿಗಾಗಿ ದೊರೆಯುವಂತಹ ಉದ್ಯೋಗಿನಿ ಯೋಜನೆ, ಗೃಹಲಕ್ಷ್ಮೀ ಯೋಜನೆಗಳ ಲಾಭ ಪಡೆದುಕೊಂಡು ವಿವಿಧ ಕೌಶಲ್ಯ ಕಲಿತು ವ್ಯಾಪಾರ ಮಾಡುವ ನಿಟ್ಟಿನಲ್ಲಿ ಸ್ವಾಲಂಬಿ ಬದಕು ಮಾಡಬೇಕು. ಮಕ್ಕಳಿಗೆ ಇರುವಂತಹ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009ರ ಅಡಿಯಲ್ಲಿ ಪ್ರತಿಯೊಂದು ಮಗು ಶಿಕ್ಷಣದಿಂದ ವಂಚಿತವಾಗಬಾರದು. ತಂದೆ-ತಾಯಿ ತೀರಿದ ಮಗು ಪೋಷಕರೊಂದಿಗೆ ವಾಸವಾಗಿದ್ದು ಶಾಲೆಗೆ ಹೋಗುತ್ತಿದ್ದರೆ ಅಂತಹ ಮಕ್ಕಳಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಪ್ರಾಯೋಜಿಕತ್ವ ಯೋಜನೆ ಸೌಲಭ್ಯ ಪಡೆದು ಆರ್ಥಿಕವಾಗಿ ಸಂಕಷ್ಟದಿಂದ ದೂರವಾಗುವಂತೆ ಅನುಕೂಲತೆಯನ್ನು ಪಡೆಯಬೇಕು. ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆ-2012 ರಲ್ಲಿ ಜಾರಿಗೆ ಬಂದಿದ್ದು, ಯಾವುದೇ ವ್ಯಕ್ತಿ ಲೈಂಗಿಕ ದೌರ್ಜನ್ಯ ಎಸಗಿದರೆ ಮತ್ತು ಮಕ್ಕಳ ದೇಹದ ಮೇಲೆ ಅಸುರಕ್ಷತ ಸ್ಪರ್ಶ ಮಾಡಿದರೆ ಘಟನೆಯ ಸ್ವರೂಪದ ಆಧಾರದ ಮೇಲೆ 20 ರಿಂದ ಜೀವಾವಧಿ ಮತ್ತು ಗಲ್ಲು ಶಿಕ್ಷೆಯನ್ನು ಸಹ ವಿಧಿಸಬಹುದು ಎಂದರು.

ಅಕ್ಕಪಡೆ ಪೊಲೀಸ್ ಅಧಿಕಾರಿ ಸಾವಿತ್ರಿ ಡಿ. ಅವರು ಮಾತನಾಡಿ, ಜಿಲ್ಲೆಯಲ್ಲಿ ರೈಲ್ವೆ ಸ್ಟೇಷನಗಳು, ಬಸ್ಸ್ ನಿಲ್ದಾಣಗಳಲ್ಲಿ, ದೇವಸ್ಥಾನ, ಸಿನಿಮಾ ಟಾಕೇಜ್, ಪ್ರವಾಸಿ ತಾಣಗಳಲ್ಲಿ, ಮಾಲ್‌ಗಳಲ್ಲಿ, ಬೀದಿಗಳಲ್ಲಿ, ಶಾಲಾ ಕಾಲೇಜ್‌ಗಳಲ್ಲಿ ಮತ್ತು ಕುಟುಂಬ ಹಾಗೂ ಸಮುದಾಯಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ದೈಹಿಕ, ಲೈಂಗಿಕ, ಮಾನಸಿಕ ಹಿಂಸೆಗಳು ಏನಾದರು ಯಾವುದೇ ವ್ಯಕ್ತಿ ನೀಡಿದಲ್ಲಿ ಅಕ್ಕಪಡೆಯ ಸಂಖ್ಯೆ 181 ಗೆ ಕರೆ ಮಾಹಿತಿ ನೀಡಿದರೆ, ಆ ಸ್ಥಳಕ್ಕೆ ಅಕ್ಕಪಡೆಯ ತಂಡ ರಕ್ಷಣೆಗಾಗಿ ಧಾವಿಸುತ್ತದೆ. ಹಾಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ತುರ್ತು ಪೊಲೀಸ್ ಉಚಿತ ಸಹಾಯವಾಣಿ ಸಂಖ್ಯೆ 112 ಗೂ ಸಹ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಸಂಯೋಜಕ ಶರಣಪ್ಪ ಅವರು ಮಾತನಾಡಿ, ಬಾಲ್ಯ ವಿವಾಹ, ಬಾಲಕಾರ್ಮಿಕ, ಮಕ್ಕಳ ಭಿಕ್ಷಾಟನೆ ಲೈಂಗಿಕ ದೌರ್ಜನ್ಯ, ಕಾಣೆಯಾದ ಮಗು, ಮಗುಪತ್ತೆ, ಬಿದಿಯಲ್ಲಿ ಬಿಸಾಕಿದ ಮಗು, ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡುಬಂದಲ್ಲಿ ದಿನದ 24 ಗಂಟೆಗಳ ಕಾಲ ಚಾಲನೆಯಲ್ಲಿರುವ ಉಚಿತ ದೂರವಾಣಿ ಸಂಖ್ಯೆ ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿ ಇಟ್ಟು ಮಗುವಿನ ರಕ್ಷಣೆ ವಿವಿಧ ಇಲಾಖೆಯ ಸಹಯೋಗದೊಂದಿಗೆ ಮಾಡಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ನಾಗರತ್ನ ಮತ್ತು ಚೈತ್ರ, ಶರಣಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಜೂ.24ರಂದು ಆಳಂದದಲ್ಲಿ ಬಸವ ಸಂಗಮ; ವಿಶ್ವಗುರು ಬಸವಣ್ಣ ಜಯಂತಿ

ಆಳಂದ,ಜೂ.20-

ವಿಶ್ವಗುರು ಬಸವಣ್ಣ ಅವರ 893ನೇ ಜಯಂತ್ಯೋತ್ಸ ವದ ಅಂಗವಾಗಿ ಜೂನ್ 24ರಂದು ಪಟ್ಟಣದ ಶ್ರೀರಾಮ ಮಾರುಕಟ್ಟೆಯಲ್ಲಿ ನಡೆಯಲಿರುವ ''ಬಸವ ಸಂಗಮ'' ಕಾರ್ಯಕ್ರಮಕ್ಕೆ ಭರ್ಜರಿ ಸಿದ್ಧತೆಗಳು ನಡೆಯುತ್ತಿದ್ದು, ಬಸವ ತತ್ವ, ವಚನ ಸಾಹಿತ್ಯ ಹಾಗೂ ಸಾಮಾಜಿಕ ಸಾಮರಸ್ಯದ ಸಂದೇಶವನ್ನು ಜನತೆಗೆ ತಲುಪಿಸುವ ಉದ್ದೇಶದಿಂದ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಯಂತಿ ಉತ್ಸ ವ ಸಮಿತಿ ಅಧ್ಯಕ್ಷ ಆನಂದ ಕೆ. ಪಾಟೀಲ ಹಾಗೂ ಉಪಾಧ್ಯಕ್ಷ ಸೋಮಶೇಖರ ಮುಲಗೆ ತಿಳಿಸಿದ್ದಾರೆ.

ಪಟ್ಟಣದ ವೀರಶೈವ ಲಿಂಗಾಯತ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಜಯಂತ್ಯೋತ್ಸ ವದ ವಾಲ್‌ಪೋಸ್ಟರ್‌ನ್ನು ಗೌರವ ಅಧ್ಯಕ್ಷ ಸಿದ್ದೇಶ್ವರ ಶಿವಾಚಾರ್ಯರು ಬಿಡುಗಡೆಗೊಳಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಉತ್ಸ ವ ಸಮಿತಿ ಮುಖಂಡರು, ಬಸವಣ್ಣನವರ ಸಮಾನತೆ, ಕಾಯಕ ಮತ್ತು ದಾಸೋಹ ತತ್ವಗಳನ್ನು ಸಮಾಜದಲ್ಲಿ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಈ ವರ್ಷದ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಜೂನ್ 24ರಂದು ಮಧ್ಯಾಹ್ನ 3.30ಕ್ಕೆ ಲಿಂಗಾಯತ ಭವನದಲ್ಲಿರುವ ಬಸವೇಶ್ವರರ ಪ್ರತಿಮೆಗೆ ವಿಶೇಷ ಪೂಜೆ ಸಲ್ಲಿಸಲಾಗುವುದು. ನಂತರ ವಚನ ಜ್ಞಾನ ಭಂಡಾರದ ಪುಸ್ತಕಗಳೊಂದಿಗೆ ಭವ್ಯ ಮೆರವಣಿಗೆ, ತಾಯಂದಿರ ಕುಂಭೋತ್ಸ ವ ಹಾಗೂ ವಿವಿಧ ಕಲಾತಂಡಗಳೊಂದಿಗೆ ಶೋಭಾಯಾತ್ರೆ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಶ್ರೀರಾಮ ಮಾರುಕಟ್ಟೆ ತಲುಪಲಿದೆ.

ಸಂಜೆ 5 ಗಂಟೆಗೆ ನಡೆಯುವ ಬಸವ ಸಂಗಮ ಸಮಾರಂಭವು ಶ್ರೀ ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳು ಅವರ ದಿವ್ಯ ಸಾನ್ನಿಧ್ಯದಲ್ಲಿ ಜರುಗಲಿದ್ದು, ವಿವಿಧ ಮಠಾಧೀಶರು, ಜನಪ್ರತಿನಿಧಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ.

ವಿಶ್ವಗುರು ಬಸವಣ್ಣನವರ ಆದರ್ಶಗಳು ಇಂದಿನ ಸಮಾಜಕ್ಕೆ ಅತ್ಯಂತ ಪ್ರಸ್ತುತವಾಗಿದ್ದು, ಯುವಜನತೆ ಬಸವ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಮುಖಂಡರು ಅಭಿಪ್ರಾಯಪಟ್ಟರು.

ಸಾರ್ವಜನಿಕರು, ಬಸವ ಅನುಯಾಯಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉತ್ಸ ವವನ್ನು ಯಶಸ್ವಿಗೊಳಿಸಬೇಕು ಎಂದು ಗೌರವ ಅಧ್ಯಕ್ಷ ಸಿದ್ದೇಶ್ವರ ಶಿವಾಚಾರ್ಯರು, ನ್ಯಾಯವಾದಿ ಬಿ.ವಿ. ಪಾಟೀಲ, ಪ್ರಚಾರ ಸಮಿತಿ ಅಧ್ಯಕ್ಷ ನಾಗರಾಜ ಶೇಗಜಿ ಹಾಗೂ ಇತರ ಮುಖಂಡರು ಮನವಿ ಮಾಡಿದರು.


ಈ ಸಂದರ್ಭದಲ್ಲಿ ಧರೆಪ್ಪ ಜಕಾಪೂರೆ, ಈರಣ್ಣಾ ಹತ್ತರಕಿ ಸೇರಿದಂತೆ ಉತ್ಸ ವ ಸಮಿತಿಯ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಪ್ರವಾಸೋದ್ಯಮ ಅತಿಥಿ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ

ಕೊಪ್ಪಳ ಜೂ.20-

ಪ್ರವಾಸೋದ್ಯಮ ಇಲಾಖೆಯಿಂದ 2024-25ನೇ ಸಾಲಿನ ಎಸ್ಸಿ ಪಿ, ಟಿಎಸ್ಪಿ ಯೋಜನೆ ಅಡಿಯಲ್ಲಿ ಪ್ರವಾಸೋದ್ಯಮ ಅತಿಥಿ ಕ್ಷೇತ್ರದಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಇತ್ತೀಚೆಗೆ (ಜೂ. 17ರಂದು) ಪ್ರಮಾ ಣ ಪತ್ರ ವಿತರಣೆ ಮಾಡಲಾಯಿತು.

ಪ್ರವಾಸೋದ್ಯಮ, ಆತಿಥ್ಯ ಕ್ಷೇತ್ರದಲ್ಲಿ ಫುಡ್ ಕ್ರಾಫ್ಟ್ ಸಂಸ್ಥೆಯಿಂದ ಎಸ್ಸಿ ಪಿ, ಟಿಎಸ್ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥಿ ಕ್ಷೇತ್ರದಲ್ಲಿ ಕೌಶಲ್ಯ ಅಭಿವೃದ್ಧಿ



ತರಬೇತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಜಿಲ್ಲೆಯ ರವಿಕುಮಾರ್ ರಾಥೋಡ್ ಮತ್ತು ರವಿ ಅವರು 2025ರ ಸೆಪ್ಟೆಂಬರ್ 15 ರಿಂದ 2025ರ ಡಿಸೆಂಬರ್ 30ರವರೆಗೆ 'ಮಲ್ಟಿ ಕೂಸಿನ್ ಕುಕ್' ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರವಾಸೋ ದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬ ಗೌಡರ್ ಅವರು ಅಭ್ಯರ್ಥಿಗಳಿಗೆ ತರಬೇತಿ ಪೂರ್ಣಗೊಳಿಸಿರುವ ಪ್ರಮಾಣ ಪತ್ರ ನೀಡಿ ಶುಭ ಹಾರೈಸಿದರು. ಪ್ರವಾಸೋದ್ಯಮ ಇಲಾಖೆಯ ಸಿಬ್ಬಂದಿ ಇದೇ ವೇಳೆ ಉಪಸ್ಥಿತರಿದ್ದರು.


ವಿದ್ಯಾರ್ಥಿಗಳು ಸ್ಟಾರ್ಟ್‌ಅಪ್ ಆರಂಭಿಸಿ ಉದ್ಯೋಗ ಸೃಷ್ಟಿಕರ್ತರಾಗಬೇಕು: ಪ್ರೊ.ಅನಿಲಕುಮಾರ ಬಿಡವೆ

ಕಲಬುರಗಿ,ಜೂ.20-

ವಿದ್ಯಾರ್ಥಿಗಳು ತಮ್ಮ ಉದ್ಯಮಶೀಲತಾ ಕೌಶಲ್ಯಗಳನ್ನು ವೃದ್ಧಿಪಡಿಸಿಕೊಂಡು ಕಡಿಮೆ ಬಂಡವಾಳದಲ್ಲಿ ಸ್ವಂತ ಸ್ಟಾರ್ಟ್ ಅಪ್‌ಗಳನ್ನು ಆರಂಭಿಸುವ ಮೂಲಕ ಸ್ವಾವಲಂಬಿಗಳಾಗಬೇಕು. ಜೊತೆಗೆ ಇತರರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯುವ ಗುರಿ ಹೊಂದ 'ಬೇಕು ಎಂದು ಪ್ರೊ. ಅನಿಲಕುಮಾರ ಬಿಡವೆ ಕರೆ ನೀಡಿದರು.

ಶರಣಬಸವ ವಿಶ್ವವಿದ್ಯಾಲಯ ಮುಖ್ಯ ಆವರಣದಲ್ಲಿರುವ ದೊಡ್ಡಪ್ಪ ಅಪ್ಪಾ ಸಭಾ ಮಂಟಪದಲ್ಲಿ ಶುಕ್ರವಾರ ಆಯೋಜಿಸಿದ್ದ ಪ್ಲೇಸ್‌ಮೆಂಟ್ ಡ್ರೈವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಂದು ಉದ್ಯೋಗಗಳ ಕೊರತೆ ಇಲ್ಲ, ಆದರೆ ಕೈಗಾರಿಕೆಗಳಿಗೆ ಅಗತ್ಯ



ವಿರುವ ಕೌಶಲ್ಯಗಳನ್ನು ಹೊಂದಿ ದ ಅಭ್ಯರ್ಥಿಗಳು ದೊರೆ ಯದಿರುವುದೇ ಪ್ರಮುಖ ಸವಾಲಾಗಿದೆ. ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರ ಬರುವ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲಿಯೇ ಉದ್ಯೋಗದಾತರ ನಿರೀಕ್ಷೆಗಳಿಗೆ ಅನುಗುಣವಾದ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶೈಕ್ಷಣಿಕ ಸಂಸ್ಥೆಗಳು ಪದವಿ ಪ್ರಮಾಣಪತ್ರ ನೀಡಬಹುದಾದರೂ, ಉದ್ಯೋಗ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಅಗತ್ಯವಾದ ಕೌಶಲ್ಯಗಳನ್ನು ವಿದ್ಯಾರ್ಥಿಗಳು ತಾವೇ ಅಭಿವೃದ್ಧಿಪಡಿಸಿಕೊಳ್ಳಬೇಕು. ಶಿಕ್ಷಣ ಸಂಸ್ಥೆಗಳು ನೀಡುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ನಿಪುಣ ವೃತ್ತಿಪರರಾಗಿ ರೂಪುಗೊಳ್ಳುವುದು ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪ್ಲೇಸ್‌ಮೆಂಟ್ ಡ್ರೈವ್‌ಗಳು ಯುವಕರ ವೃತ್ತಿಜೀವನದ ಮಹತ್ವದ ಘಟ್ಟಗಳಾಗಿದ್ದು, ಉದ್ಯೋಗ ಕ್ಷೇತ್ರದ ಸವಾಲುಗಳನ್ನು ಎದುರಿಸಲು ಸಿದ್ಧರಾಗಿರಬೇಕು. ಉದ್ಯೋಗದಾತರ ನಿರೀಕ್ಷೆಗಳನ್ನು ಪೂರೈಸುವ ಸಾಮರ್ಥ್ಯ ಬೆಳೆಸಿಕೊಳ್ಳುವುದು ಅಗತ್ಯ ಎಂದು ತಿಳಿಸಿದರು.

ತಮ್ಮ ವೃತ್ತಿಜೀವನದ ಅನುಭವ ಹಂಚಿಕೊಂಡ ಅವರು, ಶರಣಬಸವ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಆರಂಭಿಸಿದ ಪಯಣ ಇಂದು ಕುಲಪತಿ ಹುದ್ದೆಯವರೆಗೆ ತಲುಪಿದ್ದು, ನಿರಂತರ ಪರಿಶ್ರಮ ಮತ್ತು ಬದ್ಧತೆಯೇ ಯಶಸ್ಸಿನ ಗುಟ್ಟು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬಸವರಾಜ ದೇಶಮುಖ, ವಿದ್ಯಾರ್ಥಿಗಳು ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ಉದ್ಯೋಗ ಅರಸುವವರಾಗದೆ ಉದ್ಯೋಗ ಸೃಷ್ಟಿಸುವ ಉದ್ಯಮಿಗಳಾಗಬೇಕು ಎಂದು ಕರೆ ನೀಡಿದರು.

ಯುವ ಪದವೀಧರರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವಲ್ಲಿ ಪ್ಲೇಸ್‌ಮೆಂಟ್ ಡ್ರೈವ್‌ಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಅವರು ಅಭಿಪ್ರಾಯ ಪಟ್ಟರು.

ಒಂದನೇಯ ಪುಟದಿಂದ

ಸಾರ್ವಜನಿಕರ ಕುಂದುಕೊರತೆ ನಿವಾರಣೆಗೆ ಪ್ರಜಾಸೇವೆ ಇಲಾಖೆ ಸ್ಥಾಪನೆ: ಸಿಎಂ ಡಿ.ಕೆ.

ಅಂದಾಜು ಮೊತ್ತದಲ್ಲಿ ವಸತಿ ಯೋಜನೆಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ'' ಎಂದು ತಿಳಿಸಿದರು.

''ಬೆಂಗಳೂರು ಗ್ರಾಮಾಂತರದ ದೇವನಹಳ್ಳಿಯ ಚನ್ನರಾಯಪಟ್ಟಣ ಹೋಬಳಿಯ 13 ಗ್ರಾಮಗಳ 1,777 ಎಕರೆ ಜಮೀನಿನ ಪೈಕಿ ಸ್ವಯಂಪ್ರೇರಿತವಾಗಿ ಜಮೀನು ನೀಡಲು ರೈತರು ಮುಂದೆ ಬಂದಿದ್ದಾರೆ. ಇದರ ಕಾಲಾವಕಾಶವನ್ನು 31.10.2026 ರವರೆಗೆ ವಿಸ್ತರಿಸಲು ಅನುಮತಿ ನೀಡಲಾಗಿದೆ'' ಎಂದು ಹೇಳಿದರು.

''ಒಂದಷ್ಟು ಕ್ಯಾಬಿನೆಟ್ ಉಪ ಸಮಿತಿಗಳ ಜವಾಬ್ದಾರಿ ಮುಖ್ಯಮಂತ್ರಿಗೆ ನೀಡಲಾಗಿದೆ. ಕುಡಿಯುವ ನೀರಿನ ವಿಚಾರವಾಗಿ ಸಚಿವಸಂಪುಟ ವಿಸ್ತರಣೆಯಾದ ತಕ್ಷಣ ಜವಾಬ್ದಾರಿ ನೀಡಲಾಗುವುದು. ಪ್ರಸ್ತುತ ಈಗ ಇರುವವರೇ ನೀರಿನ ಸಮಸ್ಯೆ ಬರದಂತೆ ನಿಗಾವಹಿಸಬೇಕು ಎಂದು ತಿಳಿಸಲಾಗಿದೆ'' ಎಂದು ಹೇಳಿದರು.

ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರೊಂದಿಗೆ ಸಂವಾದ

ಅಧಿಕಾರಿಗಳು ಕಾಲಮಿತಿಯೊಳಗೆ ಮಾಹಿತಿ ಒದಗಿಸಿ: ಆಯುಕ್ತ ಬಿ.ವೆಂಕಟ ಸಿಂಗ್

ವಿಫಲವಾದಲ್ಲಿ ಅಂತಹ ಅಧಿಕಾರಿ ವಿರುದ್ಧ ದಂಡ ಹಾಗೂ ಸೂಕ್ತ ಕ್ರಮ ಜರುಗಿಸಲು ಆಯೋಗಕ್ಕೆ ಅಧಿಕಾರ ವಿದೆ. ಮಾಹಿತಿ ನೀಡಲು ಉದಾಸೀನತೆ, ಅಂಜಿಕೆಗೆ ಅಧಿಕಾರಿಗಳು ಒಳಗಾಗಿದ್ದು, ಕಂಡುಬರುತ್ತದೆ. ಕಾಯಿದೆಯಲ್ಲಿ 30 ಕಾಯ್ದೆಗಳ ಇವೆ. ಅವುಗಳನ್ನು ಅಧಿಕಾರಿಗಳು ಪೂರ್ಣ ಪ್ರಮಾಣದಲ್ಲಿ ತಿಳಿದುಕೊಳ್ಳಬೇಕು ಎಂದರು.

ಸರ್ಕಾರಿ ಹುದ್ದೆ ಎಲ್ಲರಿಗೂ ಸಿಗುವುದಿಲ್ಲ. ಸಿಕ್ಕವರು ಸಾರ್ವಜ ನಿಕರಿಗೆ ಉತ್ತಮ ಕೆಲಸ ಕಾರ್ಯಗಳ ಜೊತೆಗೆ ಸಾರ್ವಜನಿಕ ಕೋರಿರುವ ಮಾಹಿತಿಯನ್ನು ನಿಗದಿತ ಸಮಯದಲ್ಲಿ ನೀಡಬೇಕು. ಅಲ್ಲದೆ ದೇಶದ ವಿವಿಧ ರಾಜ್ಯಗಳ ಹೈಕೋರ್ಟ್ ಗಳು ಮಾಹಿತಿ ಹಕ್ಕು ಕುರಿತು ಆದೇಶ ನೀಡಿವೆ. ಹಾಗೂ ಕರ್ನಾಟಕ ಸರ್ಕಾರದ ಕಾರ್ಯ ದರ್ಶಿಗಳು ಕಾಲಕಾಲಕ್ಕೆ ಸುತ್ತೋಲ್ಲೆ ಹೊರಡಿಸಿದ್ದಾರೆ. ಅವುಗಳನ್ನು ಎಲ್ಲ ಇಲಾಖೆಯ ಅಧಿಕಾರಿಗಳು ಪಾಲಿಸಬೇಕು. ಶೇ.90ರಷ್ಟು ಸರ್ಕಾ ರಿ ಕಚೇರಿಗಳಲ್ಲಿ ಫೋರಂ ಎ, ಫೋರಂ ಬಿ, ಕುರಿತು ನಾಮ ಫಲಕ ಹೊಂದಿರುವುದಿಲ್ಲ. ಕಲ್ಯಾಣ ಕರ್ನಾಟಕ ಭಾಗದಲ್ಲಿ 6 ಸಾವಿರಕ್ಕೂ ಹೆಚ್ಚು ಅರ್ಜಿಗಳು ಆಯೋಗದ ಮುಂದಿವೆ. ಅವುಗಳನ್ನು ಕೂಡಲೇ ವಿಲೇವಾರಿ ಮಾಡಲು ಆಯೋಗವು ಸೂಕ್ತ ಕ್ರಮವಹಿಸಿದೆ ಎಂದರು.

ನಿಗದಿತ ಸಮಯದಲ್ಲಿ ನಡೆ ಯುವ ಕೆಡಿಪಿ ಸಭೆಯಲ್ಲಿ ಆರ್.ಟಿ .ಐ ಅರ್ಜಿಗಳ ಪ್ರಗತಿ ಪರಿಶೀಲನೆ ಸಭೆಯನ್ನು ಸಂಬಧಿಸಿದ ಅಧಿಕಾರಿ ಗಳು ಮಾಡಬೇಕು. ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು ಹಾಗೂ ಮಾಹಿತಿಯನ್ನು ಪ್ರದರ್ಶನ ಮಾಡಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಸರ್ಕಾರದ ಸುತ್ತೋಲ್ಲೆ ಪ್ರಕಾರ ಕಡ್ಡಾಯವಾಗಿ ಹಾಕಬೇಕೆಂದರು.

ಜಿಲ್ಲೆಯ ಜಿಲ್ಲಾ ಪಂಚಾಯತ್ ಅಡಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅರ್ಜಿ ಸಲ್ಲಿಕೆಯಾಗಿವೆ. ಆಯಾ ಕಾಲದಲ್ಲಿ ಮಾಹಿತಿ ನೀಡಬೇಕು. ಮಾಹಿತಿ ನೀಡಿದಲ್ಲಿ ಮೇಲೆ ಮನವಿಗೆ ಬರುವ ಅವಶ್ಯಕತೆ ಇರುವುದಿಲ್ಲ. ಅಧಿಕಾರಿಗಳಲ್ಲಿ ಸಾಕಷ್ಟು ಗೊಂದಲವಿದೆ. ಅವುಗಳನ್ನು ಮುಕ್ತ ಸಂವಾದದಲ್ಲಿ ಬಗೆಹರಿಸಿ ಕೊಳ್ಳಬೇಕೆಂದರು.

ಜಿಲ್ಲೆಯಲ್ಲಿ 2,319 ಅರ್ಜಿ ವಿಲೇವಾರಿ ಬಾಕಿ: ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆಯಡಿ ಜಿಲ್ಲೆಯ ವಿವಿಧ ಇಲಾಖೆಗಳಾದ ಪಂಚಾಯತ್ ರಾಜ್ ಇಲಾಖೆಯಲ್ಲಿ 603, ಕಂದಾಯ ಇಲಾಖೆ 341, ನಗರಾಭಿವೃದ್ಧಿ ಇಲಾಖೆ 269, ಜಲಸಂಪನ್ಮೂಲ ಇಲಾಖೆ 233, ಸಮಾಜ ಕಲ್ಯಾಣ ಇಲಾಖೆ 135, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಸೆಕ್ಷನ್, ಉನ್ನತ) 99, ಲೋಕೋ ಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು 90, ಕೃಷಿ ಇಲಾಖೆ 87, ಆರೋಗ್ಯ, ಕುಟುಂಬ ಕಲ್ಯಾಣ (ವೈದ್ಯಕೀಯ ಇಲಾಖೆ ಹೊರತುಪಡಿಸಿ) 87, ಸಹಕಾರ ಇಲಾಖೆ 82, ಗೃಹ ಇಲಾಖೆ 52, ಇಂಧನ ಇಲಾಖೆ 41, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ 39, ಅಲ್ಪಸಂಖ್ಯಾತ ಕಲ್ಯಾಣ

ಪಾರ್ವತಮ್ಮ ನಿಧನ ಹಿನ್ನೆಲೆ: ಮುಂಗಾರು ನಾಡಹಬ್ಬ ತಾತ್ಕಾಲಿಕ ಮುಂದೂಡಿಕೆ

ಜನರೊಂದಿಗೆ ಆತ್ಮೀಯ ಸಂಬಂಧ ಹೊಂದಿದ್ದರು. ಅವರ ಅಗಲಿಕೆ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದ್ದು, ಅವರ ಸೇವೆ ಮತ್ತು ಕೊಡುಗೆಗಳು ಸದಾ ಸ್ಮರಣೀಯವಾಗಿರಲಿವೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಗೋವಿಂದ ರೆಡ್ಡಿ, ಜನಾರ್ಧನ ರೆಡ್ಡಿ, ಬಂಗಿ ನರಸರೆಡ್ಡಿ, ಪುಂಡ್ಲಾ ರಾಜೇಂದ್ರ ರೆಡ್ಡಿ ಹಾಗೂ ಪ್ರತಾಪ್ ರೆಡ್ಡಿ ಉಪಸ್ಥಿತರಿದ್ದರು.

ಆಹಾರ ಇಲಾಖೆಯಿಂದ ರೈತರ ಖಾತೆಗೆ ಜೋಳ ಖರೀದಿ ಹಣ ಜಮೆ

ಮತ್ತು ಹಿಂಗಾರು ಋತುವಿನಲ್ಲಿ ಜೋಳ ಬೆಳೆದ ರೈತರಿಂದ ಈಗಾಗಲೇ ಖರೀದಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಒಟ್ಟಾರೆಯಾಗಿ ಮುಂಗಾರು ಋತುವಿನಲ್ಲಿ 15,818 ರೈತರಿಂದ 8,41,627.50 ಕ್ವಿಂಟಾಲ್ ಮತ್ತು ಹಿಂಗಾರು ಋತುವಿನಲ್ಲಿ 7291 ರೈತರಿಂದ 4,23,976.50 ಕ್ವಿಂಟಾಲ್ ಜೋಳ ಖರೀದಿ ಮಾಡಲಾಗಿದ್ದು, ಮುಂಗಾರು ಹಂಗಾಮಿನಲ್ಲಿ ಜೋಳ ಸರಬರಾಜು ಮಾಡಿದ ಒಟ್ಟು 15,818 ರೈತರ ಪೈಕಿ ಇದುವರೆಗೂ 9,372 ರೈತರ ಖಾತೆಗೆ ಈಗಾಗಲೇ ಡಿಬಿಟಿ ಮೂಲಕ 185 ಕೋಟಿ ಹಣವನ್ನು ಪಾವತಿಸಲಾಗಿದೆ.

ಇನ್ನೂಳಿದ 13,737 ರೈತರ ಖಾತೆಗೆ ಶೀಘ್ರದಲ್ಲಿಯೇ ಹಣವನ್ನು ಪಾವತಿಸಲಾಗುವುದೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಹಾಗೂ ಜಿಲ್ಲಾ ಟಾಸ್ಕಾಫೋರ್ಸ್ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ವವು ಭಾರತೀಯ ಯುವಕರ ಸಾಮರ್ಥ್ಯ ಗುರುತಿಸುತ್ತಿದೆ: ನರೇಂದ್ರ ಮೋದಿ

ಪ್ರೋತ್ಸಾಹ ಸಿಗುವ ಮತ್ತು ಉದ್ಯೋಗ ಸೃಷ್ಟಿಯೇ ಒಂದು ರಾಷ್ಟ್ರೀಯ ಅಭಿಯಾನವಾಗುವ ನವ ಭಾರತದ ಪ್ರತಿಬಿಂಬವೇ ಈ ಉಪಕ್ರಮವಾಗಿದೆ ಎಂದರು.

ಭಾರತದ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವಿಯಾ ಅವರು ಮಾತನಾಡಿದರು.

ಸಂವಾದ ಕಾರ್ಯಕ್ರಮದಲ್ಲಿ ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಅವರು ಭಾಗಿಯಾಗಿದ್ದರು.

ಈ ಕಾರ್ಯಕ್ರಮದ ನೇರ ಪ್ರಸಾರವನ್ನು ರಾಯಚೂರು ನಗರದ ಬಿಜನಗೇರಾ ರಸ್ತೆಯ ನವೋದಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಇದರಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಯಚೂರು ಗ್ರಾಮೀಣ ಕ್ಷೇತ್ರದ ಮಾಜಿ ಶಾಸಕ ತಿಪ್ಪರಾಜು ಹವಾಲ್ದಾರ್ ಅವರು ಮಾತನಾಡಿ, ದೇಶದ ಜಮ್ಮು ಮತ್ತು ಕಾಶ್ಮೀರದಿಂದ ಕನ್ಯಾಕುಮಾರಿ ಹಾಗೂ ಕೇಂದ್ರಾಡಳಿತ ಪ್ರದೇಶಗಳನ್ನು ಒಳಗೊಂಡು ದೇಶದ 200ಕ್ಕೂ ಹೆಚ್ಚಿನ ಸ್ಥಳಗಳಿಂದ ಯೋಜನೆ ಫಲಾನುಭವಿಗಳೊಂದಿಗೆ ಸಂವಾದ ಕಾರ್ಯಕ್ರಮವನ್ನು ಹೊಮ್ಮಿಕೊಳ್ಳುವ ಮೂಲಕ ನಮ್ಮ ಪ್ರಧಾನಿಗಳು ಎಲ್ಲರ ಮೆಚ್ಚುಗೆ ಪಾತ್ರರಾಗಿದ್ದಾರೆ ಎಂದರು.

ಹಿದಿನ ಸರ್ಕಾರಗಳು ಪಂಚ ವಾರ್ಷಿಕ ಯೋಜನಗಳ ಮೂಲಕ ದೇಶದ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿತ್ತು. ಆದರೆ ಮೋದಿಯವರು ಅಧಿಕಾರಕ್ಕೆ ಬಂದ ನಂತರ ದೇಶದ ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿಗೆ ನಿರ್ದಿಷ್ಟ ಕಾಲದ ಗುರಿಯನ್ನು ಹೊಂದಿದ್ದಾರೆ. ಅವರ ದೂರದೃಷ್ಟಿಯ ಆಲೋಚನೆಗಳನ್ನು ಎಲ್ಲರೂ ಮುಚ್ಚುವಂತೆ ಮಾಡಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯಾಗಿದ್ದು, ಈ ಭಾಗದಲ್ಲಿ ಉದ್ಯೋಗವನ್ನು ಸೃಷ್ಟಿಸಲು ಉದ್ಯೋಗದಾತರು ಮುಂದೆ ಬರಬೇಕು. ಪ್ರಧಾನಮಂತ್ರಿ ಅವರು ಉದ್ಯೋಗಂ ಯುವಕರ ಲಕ್ಷಣ ಎಂಬ ಉದ್ದೇಶದೊಂದಿಗೆ ದೇಶದ ಯುವಕರಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ. ಶೇ.67ರಷ್ಟು ಯುವ ಸಮೂಹವು ದೇಶದಲ್ಲಿದೆ ಎಂದರು.

ಯೋಜನೆಯ ಅರ್ಹ ಫಲಾನುಭವಿಗಳ ಯೋಜನೆಯ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ರಾಯಚೂರಿನ ನವೋದಯ ಸಂಸ್ಥೆಯಲ್ಲಿ 6 ರಿಂದ 7ಸಾವಿರ ಜನರಿಗೆ ಉದ್ಯೋಗ

ಕಿಶೋರಿ ಕೇಂದ್ರಕ್ಕೆ ಸತ್ಯ ನಾರಾಯಣ ಶೆಟ್ಟಿ ಭೇಟಿ: ಪರಿಶೀಲನೆ

ರಾಯಚೂರು ಜೂನ್ 20 (ಕರ್ನಾಟಕ ವಾರ್ತೆ): ರಾಯಚೂರು ನಗರದ ರೈಲ್ವೇ ಸ್ಟೇಷನ್ ರಸ್ತೆಯ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಾರಂಭಿಸಲಾದ ಕಿಶೋರಿ ಕೇಂದ್ರಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಸತ್ಯ ನಾರಾಯಣ ಶೆಟ್ಟಿ ಅವರು ಗುರುವಾರ ಭೇಟಿ ಪರಿಶೀಲಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಿಶೋರಿಯರಿಯರೊಂದಿಗೆ ಮಕ್ಕಳ ಹಕ್ಕುಗಳ ಕುರಿತು ಚರ್ಚೆ ಮಾಡಿದರು. ಕಿಶೋರಿ ಕೇಂದ್ರ ಉತ್ತಮ ಯೋಜನೆಯಾಗಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಕಾರನೂರು ಅವರು ಕಿಶೋರಿ ಕೇಂದ್ರದ ಉದ್ದೇಶವನ್ನು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಿಗೆಪರಿಚಯಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಂ.ಡಿಗೋಕುಲ್ ಹುಸೇನ, ಮಕ್ಕಳ ಸಹಾಯವಾಣಿಯ ಸಿಬ್ಬಂದಿಗಳು ಉಪಸ್ಥಿತಿದ್ದರು.

ಉದ್ಯೋಗಿ, ಉದ್ಯೋಗದಾತರಿಗೆ 2,400 ಕೋಟಿ ರೂ. ಪ್ರೋತ್ಸಾಹ ಧನ ವಿತರಣೆ



ಕಲಬುರಗಿ,ಜೂ.20-

ಕಳೆದ ಆಗಸ್ಟ್ 2025ರಿಂದ ಹೊಸದಾಗಿ ಉದ್ಯೋಗಕ್ಕೆ ಸೇರಿದ ಉದ್ಯೋಗಿಗಳು ಹಾಗೂ ಉದ್ಯೋಗದಾತರಿಗೆ ಕೇಂದ್ರ ಸರ್ಕಾರದ ವಿಕಸಿತ ಭಾರತ ರೋಜಗಾರ್ ಯೋಜನೆಯಡಿ ಸುಮಾರು 2,400 ಕೋಟಿ ರೂ. ಪ್ರೋತ್ಸಾಹಧನವನ್ನು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ವಿತರಣೆ ಮಾಡಿದರು.

ನವದೆಹಲಿಯ ವಿಜ್ಞಾನ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಿಬಿಟಿ (ನೇರ ಹಣ ವರ್ಗಾವಣೆ) ಮೂಲಕ ಪ್ರೋತ್ಸಾಹ ಧನ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, ಮೊದಲ ಬಾರಿಗೆ ಉದ್ಯೋಗಕ್ಕೆ ಸೇರುವ ಯುವಕರಿಗೆ ಶಕ್ತಿ ತುಂಬುವ ಯೋಜನೆಯಿದು. ಉದ್ಯೋಗಿಗಳು ಮತ್ತು ಉದ್ಯೋಗದಾತರು ಅಭಿವೃದ್ಧಿಯ ಪಯಣದಲ್ಲಿ ಜೊತೆಯಾಗಿ ಹೆಜ್ಜೆ ಇಡುವ ಮೂಲಕ ವಿಕಸಿತ ಭಾರತದ ನಿರ್ಮಾಣಕ್ಕೆ ಕೊಡುಗೆ ನೀಡಲಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದ ನೇರ ಪ್ರಸಾರವನ್ನು ಕಲಬುರಗಿಯ ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಸ್ಥಳೀಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಶಶೀಲ ಜಿ. ನಮೋಶಿ, ಪ್ರತಿಯೊಬ್ಬರ ಜೀವನದಲ್ಲಿ ಮೊದಲ ಉದ್ಯೋಗ ಮತ್ತು ಮೊದಲ ವೇತನ ಅತ್ಯಂತ ಸ್ಮರಣೀಯ ಕ್ಷಣವಾಗಿದೆ. ಎರಡು ವರ್ಷಗಳಲ್ಲಿ 3.5 ಕೋಟಿ ಉದ್ಯೋಗ ಸೃಷ್ಟಿಸುವ ಗುರಿ ಹೊಂದಿರುವ ಈ ಯೋಜನೆ ಕಾರ್ಮಿಕ ವರ್ಗಕ್ಕೆ ಕೇಂದ್ರ ಸರ್ಕಾರ ನೀಡಿರುವ ಮಹತ್ವದ ಕೊಡುಗೆಯಾಗಿದೆ ಎಂದು ಹೇಳಿದರು. ಇಪಿಎಫ್ಒ ಅಡಿಯಲ್ಲಿ ನೋಂದಾಯಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಜೊತೆಗೆ ಶಿಕ್ಷಣ, ಕೌಶಲ್ಯ, ಉದ್ಯೋಗ ಹಾಗೂ ಘನತೆಯ ಬದುಕಿಗೆ ಅಗತ್ಯವಾದ ಅವಕಾಶಗಳನ್ನು ಈ ಯೋಜನೆ ಕಲ್ಪಿಸಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಇಪಿಎಫ್ಒ ಕಲಬುರಗಿ ಪ್ರಾಂತೀಯ ಆಯುಕ್ತ ಎಂ. ಸುಬ್ರಮಣ್ಯಂ, ಯೋಜನೆಯು ಆಗಸ್ಟ್ 2025ರಿಂದ ಜುಲೈ 2026ರವರೆಗೆ ಜಾರಿಯಲ್ಲಿರಲಿದೆ. ಈ ಅವಧಿಯಲ್ಲಿ ಉದ್ಯೋಗಕ್ಕೆ ಸೇರುವ ಯುವಕರು ಹಾಗೂ ಉದ್ಯೋಗ ನೀಡುವ ಸಂಸ್ಥೆಗಳಿಗೆ ವಿಶೇಷ ಪ್ರೋತ್ಸಾಹ ಧನ ದೊರೆಯಲಿದೆ ಎಂದರು.

ಇಂದು ದೇಶಾದ್ಯಂತ ಸುಮಾರು 15 ಲಕ್ಷ ಉದ್ಯೋಗಿಗಳಿಗೆ ಡಿಬಿಟಿ ಮೂಲಕ ಪ್ರೋತ್ಸಾಹ ಧನ ವಿತರಿಸಲಾಗುತ್ತಿದ್ದು, ಕರ್ನಾಟಕದ 18,606 ಉದ್ಯೋಗಿಗಳು ಹಾಗೂ 57 ಉದ್ಯೋಗದಾತರಿಗೆ ಒಟ್ಟು 10 ಕೋಟಿ ರೂ. ಸಹಾಯಧನ ದೊರೆಯಲಿದೆ ಎಂದು ಮಾಹಿತಿ ನೀಡಿದರು.

ನೇಮಕಾತಿ ಪತ್ರ ವಿತರಣೆ :

ಕಾರ್ಯಕ್ರಮದ ವೇಳೆ ಹೊಸದಾಗಿ ಉದ್ಯೋಗಕ್ಕೆ ಆಯ್ಕೆಯಾದ ಯುವಕರಿಗೆ ವಿವಿಧ ಖಾಸಗಿ ಸಂಸ್ಥೆಗಳ ಪ್ರತಿನಿಧಿಗಳು ನೇಮಕಾತಿ ಪತ್ರಗಳನ್ನು ವಿತರಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಇಪಿಎಫ್ಒ ಪ್ರಾದೇಶಿಕ ಸಮಿತಿ ಸದಸ್ಯ ಶಂಕರ ಸುಲೆಗಾಂವ, ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ ಸೇರಿದಂತೆ ಅನೇಕ ಉದ್ಯಮಿಗಳು ಹಾಗೂ ಉದ್ಯೋಗಾರ್ಥಿಗಳು ಭಾಗವಹಿಸಿದ್ದರು.



ಬಳ್ಳಾರಿಯಲ್ಲಿ ಯೋಗ ಜಾಗೃತಿಗಾಗಿ ನಡಿಗೆ ಜಾಥಾ

ಬಳ್ಳಾರಿ,ಜೂ.20-

ಅಂತರರಾಷ್ಟ್ರಿಯ ಯೋಗ ದಿನಾಚರಣೆಯ ಅಂಗವಾಗಿ ಸಾರ್ವಜನಿಕರಲ್ಲಿ ಆರೋಗ್ಯ ಮತ್ತು ಯೋಗದ ಮಹತ್ವದ ಕುರಿತು ಜಾಗೃತಿ ಮೂಡಿಸಲು ಶುಕ್ರವಾರ ನಗರದಲ್ಲಿ ಬೃಹತ್ ನಡಿಗೆ ಜಾಥಾ (ವಾಕಥಾನ್) ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಜಂಟಿ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಾಥಾಕ್ಕೆ ನಗರದ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಟಿ. ಫಣೇಂದರ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಯೋಗದಿಂದ ದೇಹಕ್ಕೆ ಮತ್ತು ಮನಸ್ಸಿಗೆ ಅನೇಕ ಆರೋಗ್ಯಕರ ಪ್ರಯೋಜನಗಳಿವೆ. ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕಂಡುಬರುತ್ತಿರುವ ಸಕ್ಕರೆ ಕಾಯಿಲೆ (ಡಯಾಬಿಟಿಸ್) ಮತ್ತು ರಕ್ತದೊತ್ತಡದ (ಬಿಪಿ) ದಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಯೋಗ ಅತ್ಯುತ್ತಮ ಮಾರ್ಗವಾಗಿದೆ. ಆರೋಗ್ಯಕರ ಮತ್ತು ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಜೂ.21 ರಂದು ಯೋಗ ದಿನಾಚರಣೆಯಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಆಧುನಿಕ ಜೀವನಶೈಲಿಯಲ್ಲಿ ಎದುರಾಗುವ ಒತ್ತಡ ಮತ್ತು ಆರೋಗ್ಯ ಸಮಸ್ಯೆಗಳಿಗೆ ಯೋಗ ಅತ್ಯುತ್ತಮ ಮದ್ದಾಗಿದೆ. ಯೋಗವನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದ ಭಾಗವಾಗಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರನ್ನು ಪ್ರೇರೇಪಿಸಲು ಈ ನಡಿಗೆ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಾಥಾವು ನೂತನ ಜಿಲ್ಲಾಡಳಿತ ಭವನದ ಆವರಣದಿಂದ ಪ್ರಾರಂಭಗೊಂಡು ಸಂಗ ವೃತ್ತ, ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ರೈಲ್ವೆ ಸ್ಟೇಷನ್ ರಸ್ತೆಯ ಮೂಲಕ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಿ ಅಂತ್ಯಗೊಂಡಿತು.

ಜಾಥಾದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯೋಗ ಪಟುಗಳು, ಸಾರ್ವಜನಿಕರು ಹಾಗೂ ಹಿರಿಯ ನಾಗರಿಕರು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು. ಆರೋಗ್ಯವೇ ಭಾಗ್ಯ, ದಿನವೂ ಮಾಡಿ ಯೋಗ, ದೂರವಿಡಿ ರೋಗ ಎಂಬ ಘೋಷಣೆಗಳುಳ್ಳ ಫಲಕಗಳನ್ನು ಹಿಡಿದು ಸಾರ್ವಜನಿಕರ ಗಮನ ಸೆಳೆಯಲಾಯಿತು.

ಈ ವೇಳೆ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಯೋಗ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.



ಡಿಡಿಪಿಐಯ್ ರವರಿಂದ 2026 .27ನೇ ಸಾಲಿನ ಧ್ಯೇಯ ವಾಕ್ಯ ನಾಮಫಲಕ ಬಿಡುಗಡೆ

ರಾಯಚೂರು,ಜೂ.20-

ತಾಲೂಕಿನ ಸರಕಾರಿ ಪ್ರೌಢಶಾಲೆ ಉಡಮಗಲ್ ಖಾನಾಪುರದಲ್ಲಿ 2026 ಮತ್ತು 27 ನೇ ಶೈಕ್ಷಣಿಕ ಸಾಲಿನ ದೇಯ.ವಾಕ್ಯ ಉತ್ತಮ ಕಲಿಕೆ ಉಜ್ವಲ ಭವಿಷ್ಯ ನಾಮಫಲಕವನ್ನು ರಾಯಚೂರು ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಜಿ ಮಲ್ಲಿಕಾರ್ಜುನ ಅವರು ಬಿಡುಗಡೆಗೊಳಿಸಿದರು .ಮಕ್ಕಳ ಶೈಕ್ಷಣಿಕ ವಿದ್ಯಾರ್ಥಿಗಳ ಭವಿಷ್ಯ ಚೆನ್ನಾಗಿ ಇರಬೇಕಾದರೆ ವಿದ್ಯಾರ್ಥಿಗಳ ಕಲಿಕೆ ಚೆನ್ನಾಗಿ ಆಗಬೇಕು ಶಿಕ್ಷಕರು ಉತ್ತಮವಾಗಿ ಕಲಿಸಿ ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸಿರಿ ಈ ಶಾಲೆಯ ಶಿಕ್ಷಕರಾದ ದಂಡಪ್ಪ ಬಿರಾದರವರು ಮೂರ್ನಾಲ್ಕು ವರ್ಷಗಳಿಂದಲೂ ನಾಮಪಲಕವನ್ನು ತಯಾರ ಮಾಡಿ ತಮ್ಮ ಕಡೆಯಿಂದ ಶಾಲೆಗೆ ದೇಣಿಗೆ ರೂಪ ಕೊಡುತ್ತಿರುವುದು ಮೆಚ್ಚುವಂತ ವಿಷಯ ಎಂದು ಹೇಳಿದರು. ಈ ವರ್ಷದ ಘೋಷಾವಾಕ್ಯವನ್ನು ವಿದ್ಯಾರ್ಥಿಗಳಿಂದ ಓದಿಸಿದರು ನಂತರ ಅವರ ಓದಿವಿಕೆಯನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸಿದರು. ಎಸ್ ಎಸ್ ಎಲ್ ಸಿ ತರಗತಿ ಇನ್ನಿತರ ತರಗತಿಗಳು ಸಂದರ್ಶನ ಮಾಡಿ ವಿದ್ಯಾರ್ಥಿಗಳ ಕಲಿಕೆ ಕುರಿತು ಸಮಾಲೋಚಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯ ಗುರುಗಳಾದ ವೀರೇಶ ಅಂಗಡಿ ಶಿಕ್ಷಕ ವೃಂದದವರಾದ ನಫೀಸ್ ಅಂಜುಮ್ ವೀಣಾ ಕುಲಕರ್ಣಿ ಸಾವಿತ್ರಿ ಪದ್ಮಾವತಿ ಅನಿತಾ ಎನ್ ಪದ್ಮ. ಸರಸ್ವತಿ ಹಾಗೂ ಶಾಲಾ ಸಿಬ್ಬಂದಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

ಸಿರುಗುಪ್ಪ:ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ

ಸಿರುಗುಪ್ಪ ,ಜೂ.20-

ನಗರದ ಹೊರ ವಲಯದಲ್ಲಿರುವ ನಗರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ ನೀಡಿ ಪರಿಶೀಲನೆ ನಡೆಸಿ ಪೌರಾಯುಕ್ತರಿಂದ ಮಾಹಿತಿ ಪಡೆದರು ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಗರ ಸಭೆಯ ಸಿಬ್ಬಂದಿ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಲು ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಮಾತನಾಡಿ ಘನ ವಿಲೇವಾರಿ ಘಟಕದಲ್ಲಿ ಕಾರ್ಮಿಕರು ಕಸವನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಕಸ ನಿರ್ವಹಣೆ ಮಾಡಿದ ಬಗ್ಗೆ ದಾಖಲೆ ನಿರ್ವಹಿಸಬೇಕು ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ವಿಲೇವಾರಿ ಘಟಕದಲ್ಲಿ ಜನ ತ್ಯಾಜ್ಯವನ್ನು ನಿರ್ವಹಣೆ ಮಾಡಬೇಕೆಂದು ಸೂಚಿಸಿದರು ಈ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಯಂತ್ರಗಳ ಕಾರ್ಯನಿರ್ವಹಣೆ ಮತ್ತು ಅವುಗಳ ಸುಸ್ಥಿತಿ ಬಗ್ಗೆ ವರದಿ ನೀಡಬೇಕೆಂದು ಪೌರಾಯುಕ್ತರಿಗೆ ಸೂಚಿಸಿದರು ಘಟಕದಲ್ಲಿ ಕಾರ್ಯ ನಿರ್ವಹಿಸುವ ವಿವಿಧ ವಿಭಾಗಗಳನ್ನು ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಂದ ಮಾಹಿತಿ ಪಡೆದರು ತಹಶೀಲ್ದಾರ್ ಗೌಸಿಯಾ ಬೇಗಂ ಪೌರಾಯುಕ್ತ ಗಂಗಾಧರ ಪರಿಸರ ಅಧಿಕಾರಿ ದಿಲೀಪ್ ಮತ್ತು ಸಿಬ್ಬಂದಿ ಇದ್ದರು.


ಚಿತ್ರಕಲಾವಿದ ಮಂಜುನಾಥ ಗೋವಿಂದವಾಡಗೆ ನುಡಿನಮನ



ಸಿರುಗುಪ್ಪ - ಬಳ್ಳಾರಿಯ ಖ್ಯಾತ ಚಿತ್ರ ಕಲಾವಿದ ಹಾಗೂ ಕರ್ನಾಟಕ ಲಲಿತ ಕಲಾ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಮಂಜುನಾಥ ಗೋವಿಂದವಾಡ ಅವರು ಅತ್ಯುತ್ತಮ ವರ್ಣ ಚಿತ್ರಗಳ ಮೂಲಕ ಕಲಾ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದರು ಅವರ ನಿಧನದಿಂದ ಚಿತ್ರಕಲಾ ಲೋಕ ಬಡವಾಗಿದೆ ಎಂದು ಹಾಸ್ಯ ಕಲಾವಿದ ಜೆ. ನರಸಿಂಹಮೂರ್ತಿ ತಿಳಿಸಿದರು.

ಇತ್ತೀಚಿಗೆ ನಿಧನರಾದ ಬಳ್ಳಾರಿಯ ಚಿತ್ರ ಕಲಾವಿದ ಮಂಜುನಾಥ ಗೋವಿಂದವಾಡ ಅವರಿಗೆ ನಗರದಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ವತಿಯಿಂದ ಏರ್ಪಡಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಅವರು ತಮ್ಮ ಅತ್ಯುತ್ತಮ ವರ್ಣ ಚಿತ್ರಗಳ ಮೂಲಕ ಹೆಸರುವಾಸಿಯಾಗಿದ್ದು ಚಿತ್ರಕಲಾ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರವಾಗಿದೆ ಅವರ ಸಾಧನೆಯನ್ನು ಗುರುತಿಸಿ ಕರ್ನಾಟಕ ಲಲಿತ ಕಲಾ ಅಕಾಡೆಮಿಯ ಪ್ರತಿಷ್ಠಿತ ವರ್ಣ ಶ್ರೀ ಪ್ರಶಸ್ತಿ ಹಾಗೂ ರಾಜ್ಯ ಮಟ್ಟದ ಅನೇಕ ಗೌರವಗಳಿಗೆ ಪಾತ್ರರಾಗಿದ್ದರು ಎಂದರು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಮಧುಸೂಧನ, ಹಿರಿಯ ಸಾಹಿತಿ ಶಿವಕುಮಾರ ಬಳಿಗಾರ, ಉಪನ್ಯಾಸಕ ಹರೀಶ್, ಶಿಕ್ಷಕ ವೆಂಕಟೇಶ್ ಯಾದವ್ ಮುಖಂಡರಾದ ವೀರಯ್ಯ, ಗುರುರಾಜ, ಶ್ರೀನಾಥಾಚಾರ್ಯ, ನಾಗರಾಜ ಶೆಟ್ಟಿ ಮತ್ತಿತರರು ಇದ್ದರು.

ಹುನಕುಂಟಿ ನ್ಯಾಯಬೆಲೆ ಅಂಗಡಿ ಅವ್ಯವಹಾರ: ಪರವಾನಗಿ ರದ್ದತಿಗೆ ಗ್ರಾಮಸ್ಥರ ಆಗ್ರಹ



ಲಿಂಗಸುಗೂರು:ತಾಲೂಕಿನ ಹುನಕುಂಟಿ ಗ್ರಾಮದ ನ್ಯಾಯಬೆಲೆ ಅಂಗಡಿ ಸಂಖ್ಯೆ 50ರ ಮಾಲೀಕ ವಿಜಯರಾವು ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. ಪ್ರತಿ ತಿಂಗಳು ಪಡಿತರ ವಿತರಣೆಯಲ್ಲಿ ಅಕ್ರಮ ನಡೆಸುತ್ತಿದ್ದು, ಬಿಪಿಎಲ್ ಕಾರ್ಡ್‌ದಾರರಿಗೆ 5 ಕೆ.ಜಿ ಮಾತ್ರ ಹಾಗೂ ಅಂತ್ಯೋದಯ ಕಾರ್ಡ್‌ದಾರರಿಗೆ ಕೇಂದ್ರ ಸರ್ಕಾರದ ಮೇ-ಜೂನ್ ತಿಂಗಳ 70 ಕೆ.ಜಿ. ಬದಲು ಕೇವಲ 60 ಕೆ.ಜಿ. ಧಾನ್ಯ ವಿತರಿಸಿ ವಂಚಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಪತ್ರಿಕಾ ಪ್ರಕಟಣೆಯ ಮೂಲಕ ತಹಶೀಲ್ದಾರರಿಗೆ ದೂರು ಸಲ್ಲಿಸಿದ್ದಾರೆ.

ಪ್ರತಿ ಕಾರ್ಡ್‌ದಾರರಿಂದ ₹10 ಅಕ್ರಮ ವಸೂಲಿ, ನಿಗದಿತ ಸಮಯಕ್ಕೆ ಅಂಗಡಿ ತೆರೆಯದಿರುವುದು, ಸರ್ಕಾರಿ ಗೋದಾಮು ಇಲ್ಲದೆ ಸ್ವಂತ ಮನೆಯಲ್ಲೇ ಧಾನ್ಯ ಸಂಗ್ರಹ, ಪರಿಶಿಷ್ಟ ವರ್ಗದವರಿಗೆ ಮನೆ ಒಳಗೆ ಪ್ರವೇಶ ನಿರಾಕರಿಸಿ ಹೊರಗಡೆಯೇ ಪಡಿತರ ನೀಡುತ್ತಿರುವುದು ಸೇರಿದಂತೆ ಹಲವು ಆರೋಪಗಳನ್ನು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸರ್ಕಾರದ ಬಡವರ ಯೋಜನೆಯನ್ನು ವರ್ಷಗಳಿಂದ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿರುವ ಗ್ರಾಮಸ್ಥರು, ಈ ಹಿನ್ನೆಲೆಯಲ್ಲಿ ತಕ್ಷಣ ಸ್ಥಳ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿದ್ದಾರೆ.ಈ ಸಂದರ್ಭದಲ್ಲಿ ಮಾಜಿ ತಾಲೂಕ ಪಂಚಾಯತ ಸದಸ್ಯ ಪರಸಪ್ಪ ಹುನಕುಂಟಿ, ಮಾಜಿ ಗ್ರಾಮ ಪಂಚಾಯತ ಸದಸ್ಯ ಕಲ್ಲಪ್ಪ ಸೇರಿ ಗ್ರಾಮಸ್ಥರು ಇದ್ದರು.

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಸರ್ಕಾರಿ ಶಾಲೆಗಳ ದತ್ತು: ಶ್ಲಾಘನೆ

ಬಳ್ಳಾರಿ,ಜೂ.19

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಮೂಲಸೌಕರ್ಯವನ್ನು ಮೇಲ್ದರ್ಜೆಗೇರಿಸಿ, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ನಾಗೇಂದ್ರ ಅವರು ವಿಶೇಷ ಹೆಜ್ಜೆ ಇಟ್ಟಿದ್ದಾರೆ.

ಹಾಗಾಗಿ ಅವರು ತಮ್ಮ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಕ್ಷೇತ್ರದ ಬಂಡಿಹಟ್ಟಿ ಮತ್ತು ಎತ್ತಿನ ಬೂದಿಹಾಳ್ ಗ್ರಾಮದ ಸರ್ಕಾರಿ ಶಾಲೆಗಳ ಸಂಪೂರ್ಣ ಅಭಿವೃದ್ಧಿಗಾಗಿ ತಲಾ 10 ಲಕ್ಷ ರೂಪಾಯಿಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿದ್ದು, ಶುಕ್ರವಾರ ಈ ಶಾಲೆಗಳನ್ನು ದತ್ತು ಪಡೆದುಕೊಂಡರು.

ಆಯ್ಕೆಯಾದ ಎರಡು ಶಾಲೆಗಳ ಅಭಿವೃದ್ಧಿಗೆ ತಲಾ 10 ಲಕ್ಷ ರೂ. ಗಳಂತೆ ಒಟ್ಟು 20 ಲಕ್ಷ ರೂ. ಅನುದಾನ ಬಿಡುಗಡೆಗೊಳಿಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿನ ಮೂಲಸೌಕರ್ಯ ಕೊರತೆಯನ್ನು ನೀಗಿಸುವುದು, ಡಿಜಿಟಲ್ ಕಲಿಕೆಗೆ ಉತ್ತೇಜನ ಮತ್ತು ಆಕರ್ಷಕ ಶಾಲಾ ವಾತಾವರಣ ನಿರ್ಮಾಣ ಮಾಡುವುದಾಗಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಆರ್‌ಟಿಐನಿಂದ ಬಯಲಾಯ್ತು ಮೋದಿ ಮತ್ತು ಗೋದಿ ಮೀಡಿಯಾದ ಅಸಲಿ ಬಣ್ಣ!

ಯಾವ ಮಾಧ್ಯಮಗಳಿಗೆ ಎಷ್ಟೆಷ್ಟು ಕೋಟಿ ರೂಪಾಯಿಗಳ ಸಾರ್ವಜನಿಕ ಸಂಪತ್ತು ಸಂದಾಯವಾಗಿದೆ ಎಂಬುದು ಬಹಿರಂಗವಾದರೆ, ಸರ್ಕಾರದ ಪರವಾಗಿ ಸುಳ್ಳು ವರದಿಗಳನ್ನು ಬಿತ್ತರಿಸುವ ಮಾಧ್ಯಮಗಳ ಅಸಲಿ ಮುಖವಾಡ ಕಳಚಿಬೀಳುತ್ತದೆ.

ಕಳೆದ 12 ವರ್ಷಗಳಿಂದ ಪ್ರಧಾನಿ ನರೇಂದ್ರ ಮೋದಿ ಅವರ ವ್ಯಕ್ತಿತ್ವವನ್ನು ವೀರ, ಧೀರ, ಶೂರ, ಚೌಕಿದಾರ ಎಂದೆಲ್ಲ ಅತಿಶಯೋಕ್ತಿಯಿಂದ ಬಿಂಬಿಸಲಾಗುತ್ತಿದೆ. ಮೋದಿಯನ್ನು ನಾನಾ ಭಂಗಿಯಲ್ಲಿ ಬಣ್ಣಿಸಿ, ಕೊಂಡಾಡಲು ಮುಖ್ಯವಾಹಿನಿಯ ಮಾಧ್ಯಮಗಳು ಹಗಲಿರುಳು ದುಡಿಯುತ್ತಿವೆ. ಆದರೆ, ಮಾಧ್ಯಮಗಳು ಕೊಂಡಾಡುತ್ತಿರುವ ಈ ಅಪರಂಜಿ ಬಿಂಬವು ವಾಸ್ತವದಲ್ಲಿ ಗಾಜಿನ ಮೇಲೆ ಬಿಡಿಸಿದ ಕೃತಕ ಚಿತ್ರದಷ್ಟೇ ನಾಜೂಕಾದ ಪ್ರಹಸನ. ಮೋದಿ ಎಂಬ ಬಲೂನಿಗೆ ಮತ್ತಷ್ಟು ಗಾಳಿ ತುಂಬಲು ಮಾಧ್ಯಮಗಳು ಪತ್ರಿಕೋದ್ಯಮದ ನೈತಿಕತೆಯನ್ನೇ ಆರ್ಥಿಕ ಆಮಿಷಕ್ಕೆ ಬಲಿಕೊಟ್ಟಿವೆ. ಸಾರ್ವಜನಿಕರ ತೆರಿಗೆ ಹಣವನ್ನು ನೀರಿನಂತೆ ಹರಿಸಿ ಮಾಧ್ಯಮಗಳ ಧ್ವನಿಯನ್ನು ಖರೀದಿಸುವ ಮೂಲಕ ಸೃಷ್ಟಿಸಲಾಗಿರುವ ಈ ಕೃತಕ ಪ್ರಭಾವಳಿಯ ಅಸಲಿ ಮುಖವಾಡ ಈಗ ಅಂಕಿಅಂಶಗಳ ಸಮೇತ ಜಗಜ್ಜಾಹೀರಾಗಿದೆ.

ಟಿಎಂಸಿ ಸಂಸದ ಸಾಕೇತ್ ಗೋಖಲೆ ಅವರು ಆರ್‌ಟಿಐ ಮೂಲಕ ಪಡೆದ ಮಾಹಿತಿಯು ಆಘಾತಕಾರಿ ಅಂಕಿಅಂಶಗಳನ್ನು ಬಹಿರಂಗಪಡಿಸಿದೆ. ಕೇಂದ್ರ ಸರ್ಕಾರವು ಕಳೆದ ಐದೂವರೆ ವರ್ಷಗಳಲ್ಲಿ, ಅಂದರೆ, 2020ರಿಂದ 2026ರವರೆಗೆ ಮೋದಿ ಅವರ ವರ್ಚಸ್ಸನ್ನು ಹೊಳಪುಗೊಳಿಸಲು ಮಾಧ್ಯಮಗಳ ಜಾಹೀರಾತುಗಳಿಗಾಗಿ ಬರೋಬ್ಬರಿ 2,586 ಕೋಟಿ ರೂ.ಗಳನ್ನು ವೆಚ್ಚ ಮಾಡಿದೆ. ಅಂದಹಾಗೆ, ಇದು ಕೇವಲ ಕೇಂದ್ರ ಸರ್ಕಾರದ ಜಾಹೀರಾತು ಏಜೆನ್ಸಿ ಯಾದ ಸೆಂಟ್ರಲ್ ಬ್ಯೂರೋ ಆಫ್ ಕಮ್ಯುನಿಕೇಷನ್ () ಮಾಡಿದ ವೆಚ್ಚ ಮಾತ್ರ. ಇತರ ಸಚಿವಾಲಯಗಳು, ಸಾರ್ವಜನಿಕ ವಲಯದ ಉದ್ಯಮಗಳು ಹಾಗೂ ಬಿಜೆಪಿ ಪಕ್ಷ ವ್ಯಯಿಸಿರುವ ಜಾಹೀರಾತು ವೆಚ್ಚಗಳನ್ನು ಸೇರಿಸಿದರೆ ಈ ಮೊತ್ತ ಇನ್ನೂ ಬೃಹತ್ ಪ್ರಮಾಣದ್ದಾಗಿದೆ.

ನಾವು ನೋಡಬೇಕಾದ್ದು, 2,586 ಕೋಟಿ ರೂ. ಎಂಬುದು ಕೇವಲ ಅಂಕಿ ಅಂಶವಲ್ಲ. ಇದು ಸಾರ್ವಜನಿಕ ಹಣವನ್ನು ಒಬ್ಬ ನಾಯಕನ ವರ್ಚಸ್ಸು ಹೆಚ್ಚಿಸಲು ಮಾಡಲಾದ ದುಂದುವೆಚ್ಚ. ಅರ್ಥಾತ್ ದುರ್ವಿನಿಯೋಗ/ದುರ್ಬಳಕೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರದ ಹೊಣೆಗಾರಿಕೆ ಎನ್ನುವುದು ಕೇವಲ ಕಾಗದದ ಮೇಲಿನ ನಿಯಮವಲ್ಲ; ಅದು ಸಾರ್ವಜನಿಕರ ಪ್ರತಿಯೊಂದು ಪೈಸೆಗೂ ಉತ್ತರದಾಯಿಯಾಗಿರಬೇಕಾದ ನೈತಿಕ ಜವಾಬ್ದಾರಿಯೂ ಹೌದು. ಆದರೆ, ಮೋದಿ ಸರ್ಕಾರ ಸಾರ್ವಜನಿಕ ಕಲ್ಯಾಣ ಮತ್ತು ನೈಜ ಅಭಿವೃದ್ಧಿಗಿಂತ ಹೆಚ್ಚಾಗಿ ವೈಯಕ್ತಿಕ ಪ್ರಚಾರಕ್ಕೆ ಆದ್ಯತೆ ನೀಡಿದೆ ಎಂಬುದು ಇಂದಿನ ಕಠೋರ ಸತ್ಯ.

ಆರ್‌ಟಿಐ ಮಾಹಿತಿ ಪ್ರಕಾರ, ಈ ಇಡೀ ಪ್ರಚಾರ ಜಾಲದಲ್ಲಿ ಅತಿ ದೊಡ್ಡ ಮೊತ್ತವನ್ನು ದೃಶ್ಯ ಮತ್ತು ಶ್ರಾವ್ಯ (ರೇಡಿಯೋ) ಮಾಧ್ಯಮಗಳಿಗೆ ಧಾರೆ ಎರೆಯಲಾಗಿದೆ. ಟಿವಿ ಮತ್ತು ರೇಡಿಯೋ ಮಾಧ್ಯಮಗಳ ಮೂಲಕ ಜನರಲ್ಲಿ ಮೋದಿಯನ್ನು ದೈತ್ಯನನ್ನಾಗಿ ಬಿಂಬಿಸಲು ಬರೋಬ್ಬರಿ 936 ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗಿದೆ. ದಿನದ ಇಪ್ಪತ್ತನಾಲ್ಕು ಗಂಟೆಯೂ ಜನರ ಕಣ್ಣಿಗೆ ಮತ್ತು ಕಿವಿಗೆ ಮೋದಿ ಕುರಿತ ಪ್ರಚಾರವೇ ಬೀಳುವಂತೆ ಮಾಡಲು ಈ ಹೂಡಿಕೆ ನೆರವಾಗಿದೆ. ಇನ್ನು ಸಾಂಪ್ರದಾಯಿಕ ಮುದ್ರಣ ಮಾಧ್ಯಮಗಳಾದ ದಿನಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ಪುಟಗಳಲ್ಲಿ ಮೋದಿ ಚಿತ್ರವನ್ನು ಅಚ್ಚುಹಾಕಲು, ಓದುಗರ ಕಣ್ಣಿನಲ್ಲಿ ರಾರಾಜಿಸುವಂತೆ ಮಾಡಲು 796 ಕೋಟಿ ರೂ.ಗಳನ್ನು ಬಳಸಿಕೊಳ್ಳಲಾಗಿದೆ. ದೇಶದ ಪ್ರಮುಖ ನಗರಗಳಿಂದ ಹಿಡಿದು ಗ್ರಾಮೀಣ ಭಾಗದ ಮೂಲೆ ಮೂಲೆಗಳವರೆಗಿನ ರಸ್ತೆಗಳಲ್ಲಿ ಬೃಹತ್ ಫ್ಲೆಕ್ಸ್, ಬ್ಯಾನರ್ ಹಾಗೂ ಹೋರ್ಡಿಂಗ್‌ಗಳ ಮೂಲಕ ಮೋದಿಯ ಮುಖವನ್ನು ದಿನವಿಡೀ ಪ್ರದರ್ಶಿಸಲು 584 ಕೋಟಿ ರೂ.ಗಳನ್ನು ನೀರಿನಂತೆ ಹರಿಸಲಾಗಿದೆ. ಇವೆಲ್ಲದರ ಜೊತೆಗೆ, ಇತ್ತೀಚಿನ ಯುವ ಪೀಳಿಗೆಯನ್ನು ತಲುಪಲು ಡಿಜಿಟಲ್ ಮತ್ತು ಸಾಮಾಜಿಕ ಮಾಧ್ಯಮಗಳ ವೇದಿಕೆಗಳನ್ನು ಬಳಸಿಕೊಳ್ಳಲಾಗಿದ್ದು, ಅದಕ್ಕಾಗಿ 270 ಕೋಟಿ ರೂ.ಗಳನ್ನು ವ್ಯಯಿಸಲಾಗಿದೆ. ಈ ಬೃಹತ್ ವರ್ಗೀಕರಣವು ದೇಶದ ನಾಗರಿಕರಲ್ಲಿ ನಿರಂತರವಾಗಿ ಒಂದು ರೀತಿಯ ಕೃತಕ ಭ್ರಮೆಯನ್ನು ಜೀವಂತವಾಗಿಡಲು ಸಾರ್ವಜನಿಕ ನಿಧಿಯನ್ನು ಹೇಗೆ ಬಳಸಲಾಗುತ್ತಿದೆ ಎಂಬುದನ್ನು ಸ್ಪಷ್ಟವಾಗಿ ತೋರುತ್ತದೆ.

ಇಲ್ಲಿ ಗಮನಿಸಬೇಕಾದ ಆತಂಕಕಾರಿ ವಿಷಯವೆಂದರೆ, ಆರ್‌ಟಿಐನಲ್ಲಿ ಬಹಿರಂಗವಾಗಿರುವ ಈ 2,586 ಕೋಟಿ ರೂ.ಗಳ ಮೊತ್ತವು ಕೇವಲ ಸಿಬಿಸಿ ಒಂದೇ ಮಾಡಿರುವ ಖರ್ಚು ಮಾತ್ರ. ಇದು ಇಡೀ ಪ್ರಚಾರ ಸಾಮ್ರಾಜ್ಯದ ಹಿಮನದಿಯ ಕೇವಲ ಒಂದು ಮೇಲ್ಮೈ ತುದಿಯಷ್ಟೇ. ಕೇಂದ್ರ ಸರ್ಕಾರದ ಅಡಿಯಲ್ಲಿ ಬರುವ ರೈಲ್ವೆ, ರಕ್ಷಣೆ, ಪೆಟ್ರೋಲಿಯಂ, ರಸ್ತೆ ಸಾರಿಗೆಯಂತಹ ಹತ್ತಾರು ಪ್ರಮುಖ ಸಚಿವಾಲಯಗಳು ತಮ್ಮದೇ ಆದ ಪ್ರತ್ಯೇಕ ಬಜೆಟ್‌ಗಳ ಮೂಲಕ ಮೋದಿ ಅವರ ಫೋಟೋ ಇರುವ ಬೃಹತ್ ಜಾಹೀರಾತುಗಳನ್ನು ನಿರಂತರವಾಗಿ ಪ್ರಕಟಿಸಿವೆ. ಜೊತೆಗೆ, ದೊಡ್ಡ ದೊಡ್ಡ ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಆಡಳಿತ ಪಕ್ಷವು ಸ್ವತಃ ತನ್ನ ಚುನಾವಣಾ ಪ್ರಚಾರಕ್ಕಾಗಿ ಮಾಡುವ ಸಹಸ್ರಾರು ಕೋಟಿ ರೂ.ಗಳ ವೆಚ್ಚಗಳು ಈ ಆರ್‌ಟಿಐ ಮಾಹಿತಿಯಲ್ಲಿ ಒಳಗೊಂಡಿಲ್ಲ.

ಒಂದು ವೇಳೆ ಈ ಎಲ್ಲ ಸಚಿವಾಲಯಗಳು, ಸರ್ಕಾರಿ ಸ್ವಾಮ್ಯದ ಬ್ಯಾಂಕುಗಳು ಹಾಗೂ ಸಂಸ್ಥೆಗಳು ಕೇವಲ ಒಬ್ಬ ವ್ಯಕ್ತಿಯ ವರ್ಚಸ್ಸು ಹೆಚ್ಚಿಸಲು ಮಾಡಿದ ಒಟ್ಟು ವೆಚ್ಚವನ್ನು ಕ್ರೋಡೀಕರಿಸಿದರೆ, ಆ ಅಂತಿಮ ಮೊತ್ತವು 10,000 ಕೋಟಿ ರೂಪಾಯಿಗಳ ಗಡಿಯನ್ನು ದಾಟಿದರೂ ಅಚ್ಚರಿಯಿಲ್ಲ. ದೇಶದ ಆಸ್ಪತ್ರೆಗಳು, ಶಾಲೆಗಳು, ರಸ್ತೆಗಳು ಹಾಗೂ ಉದ್ಯೋಗ ಸೃಷ್ಟಿಯಂತಹ ಮೂಲಭೂತ ಅಗತ್ಯಗಳಿಗೆ ಹಣದ ಕೊರತೆಯಿದೆ ಎಂದು ಹೇಳುವ ಸರ್ಕಾರ, ಮೋದಿ ಎಂಬ ಭ್ರಾಂತಿ ಸೃಷ್ಟಿಗಾಗಿ ಇಷ್ಟೊಂದು ಬೃಹತ್ ಮೊತ್ತವನ್ನು ವಿನಿಯೋಗಿಸಿದೆ. ಜನರ ಕಣ್ಣಿಗೆ ಮಣ್ಣೆರಚಿದೆ.

ಮತ್ತೊಂದು ಗಂಭೀರ ವಿಚಾರವೆಂದರೆ, ಯಾವಾಗ ಒಬ್ಬ ನಾಗರಿಕ ಅಥವಾ ಜನಪ್ರತಿನಿಧಿ ಸಾರ್ವಜನಿಕ ಹಣದ ಬಳಕೆಯ ಬಗ್ಗೆ ವಿವರಗಳನ್ನು ಕೇಳುತ್ತಾರೋ, ಆಗ ಪಾರದರ್ಶಕವಾಗಿ ಉತ್ತರಿಸುವುದು ಸರ್ಕಾರದ ಕರ್ತವ್ಯ. ಆದರೆ, ಇಲ್ಲಿ, ಸಾರ್ವಜನಿಕರ ಹಣವನ್ನು ಬಳಸಿಕೊಂಡು ಯಾರಿಗೆ ಲಾಭ ಮಾಡಿಕೊಡಲಾಗಿದೆ ಎಂಬ ಪ್ರಶ್ನೆಗೆ ಸರ್ಕಾರ ಉತ್ತರಿಸಿಲ್ಲ. ಈ ಬೃಹತ್ 2,586 ಕೋಟಿ ರೂ.ಗಳ ನಿಧಿಯನ್ನು ಯಾವ ಮಾಧ್ಯಮ ಸಂಸ್ಥೆಗಳಿಗೆ, ಯಾವ ಟಿವಿ ಚಾನೆಲ್‌ಗಳಿಗೆ ಅಥವಾ ಯಾವ ಖಾಸಗಿ ಜಾಹೀರಾತು ಏಜೆನ್ಸಿ ಗಳಿಗೆ ಹಂಚಿಕೆ ಮಾಡಲಾಗಿದೆ ಎಂಬ ನಿರ್ದಿಷ್ಟ ಮಾಹಿತಿ ನೀಡುವಂತೆ ಸಾಕೇತ್ ಗೋಖಲೆ ಕೇಳಿದ್ದರು. ಆದರೆ, ಆ ಮಾಹಿತಿ ನೀಡಲು ಕೇಂದ್ರ ಸಂವಹನ ಬ್ಯೂರೋ ನಿರಾಕರಿಸಿದೆ. ಅದಕ್ಕೆ ಅವರು ನೀಡಿದ ನೆಪ ವಾಣಿಜ್ಯ ವಿಶ್ವಾಸಾರ್ಹತೆ.

ಸಾರ್ವಜನಿಕರು ತಮ್ಮ ರಕ್ತ ಬೆವರಿನ ಗಳಿಕೆಯಿಂದ ಸರ್ಕಾರಕ್ಕೆ ಕಟ್ಟುವ ತೆರಿಗೆ ಹಣ ಯಾರ ಜೇಬಿಗೆ ಹೋಗಿ ಸೇರುತ್ತಿದೆ ಎಂದು ತಿಳಿದುಕೊಳ್ಳುವ ಕನಿಷ್ಠ ಹಕ್ಕು ಈ ದೇಶದ ಜನರಿಗಿದೆ. ಆದರೆ, ಅದನ್ನು ವ್ಯವಸ್ಥಿತವಾಗಿ ಮುಚ್ಚಿಡುವ ಮೂಲಕ ಸರ್ಕಾರವು ತನ್ನ ಉತ್ತರದಾಯಿತ್ವದಿಂದ ನುಣುಚಿಕೊಂಡಿದೆ. ಯಾವ ಮಾಧ್ಯಮಗಳಿಗೆ ಎಷ್ಟೆಷ್ಟು ಕೋಟಿ ರೂಪಾಯಿಗಳ ಸಾರ್ವಜನಿಕ ಸಂಪತ್ತು ಸಂದಾಯವಾಗಿದೆ ಎಂಬುದು ಬಹಿರಂಗವಾದರೆ, ಸರ್ಕಾರದ ಪರವಾಗಿ ಸುಳ್ಳು ವರದಿಗಳನ್ನು ಬಿತ್ತರಿಸುವ ಮಾಧ್ಯಮಗಳ ಅಸಲಿ ಮುಖವಾಡ ಕಳಚಿಬೀಳುತ್ತದೆ.

ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭ ಎಂದು ಕರೆಯಲ್ಪಡುವ ಮಾಧ್ಯಮಗಳು ಸಮಾಜದಲ್ಲಿ ಧ್ವನಿ ಇಲ್ಲದವರ ಪರವಾಗಿ ನಿಲ್ಲಬೇಕು. ಆಡಳಿತಗಾರರ ತಪ್ಪುಗಳನ್ನು ನಿರ್ಭೀತವಾಗಿ ಪ್ರಶ್ನಿಸಬೇಕು. ಆದರೆ, ಯಾವಾಗ ಒಂದು ಮಾಧ್ಯಮ ಸಂಸ್ಥೆಯ ಆರ್ಥಿಕ ಉಳಿವು ಮತ್ತು ಲಾಭವು ಸಂಪೂರ್ಣವಾಗಿ ಸರ್ಕಾರದ ಸಾವಿರಾರು ಕೋಟಿ ರೂ.ಗಳ ಜಾಹೀರಾತು ನಿಧಿಯ ಮೇಲೆ ಅವಲಂಬಿತವಾಗುತ್ತದೆಯೋ, ಆಗ ಆ ಮಾಧ್ಯಮವು ತನ್ನ ನೈತಿಕತೆಯನ್ನು ಕಳೆದುಕೊಳ್ಳುತ್ತದೆ. 2,586 ಕೋಟಿ ರೂ.ಗಳ ಈ ಬೃಹತ್ ಆರ್ಥಿಕ ಆಮಿಷ ಮತ್ತು ನಿಯಂತ್ರಣದ ಮೂಲಕ ಕೇಂದ್ರ ಸರ್ಕಾರವು ದೇಶದ ಮುಖ್ಯವಾಹಿನಿಯ ಮಾಧ್ಯಮಗಳನ್ನು ತನ್ನ ಕಪಿಮುಷ್ಟಿಯಲ್ಲಿ ಇಟ್ಟುಕೊಂಡಿದೆ. ಇದೇ ಕಾರಣಕ್ಕಾಗಿ ಇಂದು ಭಾರತೀಯ ಮಾಧ್ಯಮ ರಂಗವನ್ನು ಗೋದಿ ಮೀಡಿಯಾ ಎಂದು ಟೀಕಿಸಲಾಗುತ್ತಿದೆ.

ಸರ್ಕಾರದ ತಪ್ಪು ನಿರ್ಧಾರಗಳು, ಆರ್ಥಿಕ ಬಿಕ್ಕಟ್ಟುಗಳು ಮತ್ತು ಜನರ ಸಂಕಷ್ಟಗಳನ್ನು ವರದಿ ಮಾಡಬೇಕಾದ ಚಾನೆಲ್‌ಗಳು, ದಿನದ ಇಪ್ಪತ್ತನಾಲ್ಕು ಗಂಟೆಯೂ ಮೋದಿಯನ್ನು ಕೊಂಡಾಡುವ, ಅವರ ಸುತ್ತ ಒಂದು ದೈವಿಕ ಭ್ರಮೆಯನ್ನು ಸೃಜಿಸುವ ಭಜನಾ ಮಂಡಳಿಗಳಂತೆ ಕೆಲಸ ಮಾಡುತ್ತಿವೆ. ಇದು ಕೇವಲ ಮಾಧ್ಯಮಗಳ ವೈಫಲ್ಯವಲ್ಲ, ಬದಲಿಗೆ ಆರ್ಥಿಕ ಶಕ್ತಿಯನ್ನು ಬಳಸಿ ಸ್ವತಂತ್ರ ಪತ್ರಿಕೋದ್ಯಮದ ಧ್ವನಿಯನ್ನು ವ್ಯವಸ್ಥಿತವಾಗಿ ಹತ್ತಿಕ್ಕುವ ಮತ್ತು ಸಾರ್ವಜನಿಕರ ಯೋಚನಾ ಶಕ್ತಿಯನ್ನು ದುರ್ಬಲಗೊಳಿಸುವ ಬೃಹತ್ ಷಡ್ಯಂತ್ರವೂ ಕೂಡ.


ದೇಶದ ಮಾಧ್ಯಮಗಳು ತಮ್ಮ ನೈತಿಕತೆ ಮತ್ತು ಪ್ರತಿಕಾ ಸ್ವಾತಂತ್ರವನ್ನು ಮೋದಿಯ ಪದತಲದಲ್ಲಿಟ್ಟು ಶರಣಾಗಿರುವುದರಿಂದಲೇ, ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಭಾರತವು 180 ರಾಷ್ಟ್ರಗಳ ಪೈಕಿ 159ನೇ ಹೀನಾಯ ಸ್ಥಾನಕ್ಕೆ ಕುಸಿದಿದೆ. ಇದೇ ಹೊತ್ತಿನಲ್ಲಿ ನಮ್ಮೆದುರು ಇತ್ತೀಚೆಗೆ, ಮೋದಿ ಅವರನ್ನು ಗಟ್ಟಿಧ್ವನಿಯಲ್ಲಿ ಪ್ರಶ್ನಿಸಿದ್ದ ಪರ್ತಕರ್ತರಿರುವ ನಾರ್ವೆ ಇದೇ ಸೂಚ್ಯಂತದಲ್ಲಿ ಅಗ್ರ ಸ್ಥಾನದಲ್ಲಿದೆ.

ನಾರ್ವೆಯಲ್ಲಿ ಪತ್ರಕರ್ತರಿಗೆ ಬಲವಾದ ರಕ್ಷಣೆ ಮತ್ತು ಸರ್ಕಾರದ ಪಾರದರ್ಶಕತೆ ಇದೆ. ಮಾಧ್ಯಮಗಳು ತಮ್ಮನ್ನು ಮಾರಿಕೊಂಡಿಲ್ಲ. ಅಲ್ಲಿನ ಸರ್ಕಾರವು ತಮ್ಮನ್ನು ಟೀಕಿಸುವ ಮಾಧ್ಯಮಗಳಿಗೂ ಆರ್ಥಿಕ ನೆರವು ನೀಡುತ್ತದೆ. ಪತ್ರಕರ್ತರಿಗೆ ಯಾವುದೇ ಬೆದರಿಕೆಗಳಿಲ್ಲ. ಆದರೆ, ಭಾರತದಲ್ಲಿ ಪ್ರಭುತ್ವವನ್ನು ಪ್ರಶ್ನಿಸುವ ಪತ್ರಕರ್ತರ ಮೇಲೆ ದೇಶದ್ರೋಹದಂತಹ ಕಠಿಣ ಮೊಕದ್ದಮೆಗಳು, ತನಿಖಾ ಸಂಸ್ಥೆಗಳ ದಾಳಿ ಹಾಗೂ ದೈಹಿಕ ದೌರ್ಜನ್ಯಗಳ ಮೂಲಕ ಭಯದ ವಾತಾವರಣ ಸೃಷ್ಟಿಸಲಾಗುತ್ತಿದೆ.

ಪ್ರಭುತ್ವವನ್ನು ಪ್ರಶ್ನಿಸದ, ಪುಸಲಾವಣೆಗಿಳಿದ ಮಾಧ್ಯಮಗಳು ಸರ್ಕಾರದ ಕೋಟ್ಯಂತರ ರೂ.ಗಳ ಜಾಹೀರಾತು ನಿಧಿಯ ಮೇಲೆ ಬದುಕುತ್ತಿವೆ. ಅದಕ್ಕಾಗಿ, ತಮ್ಮನ್ನು ತಾವು ಮಾರಿಕೊಂಡಿವೆ. ಮಾರಿಕೊಂಡ ಮಾಧ್ಯಮಗಳಲ್ಲಿ ಮೋದಿ ಮಹಾನ್ ವ್ಯಕ್ತಿಯಾಗಿದ್ದಾರೆ, ಪ್ರಶ್ನಾತೀತರಾಗಿದ್ದಾರೆ, ದೇಶಕ್ಕೆ ದಿಕ್ಕಾಗಿ ಬಿಂಬಿತರಾಗುತ್ತಿದ್ದಾರೆ.

ನಿಜವಾದ ದೇಶದ ಪ್ರಗತಿ ಎನ್ನುವುದು ದಿನಪತ್ರಿಕೆಗಳ ಮುಖಪುಟದಲ್ಲಿ ಬರುವ ವರ್ಣರಂಜಿತ ಜಾಹೀರಾತುಗಳಲ್ಲಾಗಲಿ ಅಥವಾ ಟಿವಿ ಪರದೆಯ ಮೇಲಿನ ಅಬ್ಬರದ ಚರ್ಚೆಗಳಲ್ಲಾಗಲಿ ಇರುವುದಿಲ್ಲ. ಅದು ದೇಶದ ಸಾಮಾನ್ಯ ನಾಗರಿಕನ ಬದುಕಿನ ಗುಣಮಟ್ಟ ಸುಧಾರಿಸುವುದರಲ್ಲಿ, ಯುವಜನರಿಗೆ ಸಿಗುವ ಉದ್ಯೋಗದಲ್ಲಿ ಮತ್ತು ಹಿಂದುಳಿದ-ತಳ ಸಮುದಾಯಗಳ ಸಬಲೀಕರಣದಲ್ಲಿ ಇರುತ್ತದೆ ಎಂಬುದು ಯಾವತ್ತು ದೇಶದ ಜನರಿಗೆ ಅರ್ಥವಾಗುತ್ತದೋ, ಅಂದು ದೇಶ ದೇಶವಾಗಿ ಉಳಿಯುತ್ತದೆ.

ಜತೆಗೆ ಮೈತ್ರಿ: ಅಳಿವಿನ ಹಾದಿ ತಲುಪಿತೇ ಜೆಡಿಎಸ್?



ಜೆಡಿಎಸ್‌ನ 18 ಮಂದಿ ಶಾಸಕರು ಇದ್ದರೂ, ಮೊನ್ನೆ ನಡೆದ ವಿಧಾನ ಪರಿಷತ್ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಗೆ 14 ಮತ ಬಿದ್ದದ್ದು ಪಕ್ಷವು ಅಳಿವಿನ ಹಾದಿಯ ಕಡೆ ಸಾಗುತ್ತಿರುವುದಕ್ಕೆ ಉತ್ತಮ ಉದಾಹರಣೆಯಾಗಿದೆ. ತಮ್ಮ ಶಾಸಕರುಗಳಿಗೆ ಪಕ್ಷದ ಮೇಲೆ ನಂಬಿಕೆ ಇಲ್ಲದಂತಾಗಿದೆ. ಮೈತ್ರಿ ಹೀಗೆಯೇ ಮುಂದುವರೆದರೆ ಜಾತ್ಯತೀತ ಪಕ್ಷ ಜೆಡಿಎಸ್, ಕೋಮುವಾದಿ ಪಕ್ಷದ ರಾಜಕೀಯ ಆಟಕ್ಕೆ ಬಲಿಯಾಗಿ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುವಲ್ಲಿ ಯಾವುದೇ ಅನುಮಾನವಿಲ್ಲ. 2028ರ ಚುನಾವಣೆಯಲ್ಲಿ ಜೆಡಿಎಸ್ ತನ್ನ ಎಲ್ಲ ಮತಬ್ಯಾಂಕ್ ಬಿಜೆಪಿಗೆ ಒಪ್ಪಿಸಿ ಕೈ ಕಟ್ಟಿ ನಿಲ್ಲುವಂತಾದರೂ ಅಚ್ಚರಿಪಡಬೇಕಾಗಿಲ್ಲ.

ಜೆಡಿಎಸ್ ಒಂದು ಕಾಲದಲ್ಲಿ ಪ್ರಬಲವಾದ ಪ್ರಾದೇಶಿಕ ಪಕ್ಷವಾಗಿ ತನ್ನದೇ ಆದ ಹೆಜ್ಜೆ ಗುರುತು ಮೂಡಿಸಿತ್ತು. ಜನತಾ ದಳ ಪಕ್ಷದ ವಿಭಜನೆಯಿಂದಾಗಿ ಕರ್ನಾಟಕದಲ್ಲಿ 1999ರ ಮೊದಲ ವಿಧಾನಸಭಾ ಚುನಾವಣೆಯಲ್ಲಿ ಗೆಲವು ಸಾಧಿಸಿದ ಜೆಡಿಎಸ್ 10 ಸ್ಥಾನಗಳನ್ನು ತನ್ನದಾಗಿಸಿಕೊಂಡಿತು. ನಂತರ 2004ರ ಚುನಾವಣೆಯಲ್ಲಿ58 ಸ್ಥಾನ ಗೆದ್ದು ಕಿಂಗ್‌ಮೇಕರ್ ಪಾತ್ರವಹಿಸಿ ಮೊದಲು ಕಾಂಗ್ರೆಸ್ ಜತೆಗೆ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಿತು. ನಂತರ ಬಿಜೆಪಿ ಜತೆಗೆ ಸರ್ಕಾರ ರಚಿಸಿ ವಿವಾದಕ್ಕೆ ಕಾರಣವಾಯಿತು. ರಾಜಕೀಯ, ಅಧಿಕಾರಕ್ಕಾಗಿ ಮಾಡಿಕೊಂಡ ಈ ತೀರ್ಮಾನದಿಂದ ಪಕ್ಷದ ವಿಶ್ವಾಸಾರ್ಹತೆಯ ಮೇಲೆ ಪರಿಣಾಮ ಬೀರಿತು. ಇದರ ಪರಿಣಾಮ 2008ರ ಚುನಾವಣೆಯಲ್ಲಿ 28 ಸ್ಥಾನಗಳಿಗೆ ಇಳಿಯಿತು.

2013ರ ಚುನಾವಣೆಯಲ್ಲಿ 40 ಸ್ಥಾನಗಳನ್ನು ಗೆದ್ದು ಸ್ವಲ್ಪ ಏರಿಕೆ ಕಂಡಿತು. ಇದಾದ ನಂತರ 2018ರ ಚುನಾವಣೆಯಲ್ಲಿ 37 ಸ್ಥಾನಗಳನ್ನು ಗೆದ್ದು ಮತ್ತೆ ಕಾಂಗ್ರೆಸ್ ಜತೆಗೆ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಿ ಎಚ್ ಡಿ ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡರು. ಆದರೆ 2023ರ ವಿಧಾನಸಭೆ ಚುನಾವಣೆಯಲ್ಲಿ ಕೇವಲ 19 ಸ್ಥಾನಗಳಲ್ಲಿ ಗೆಲುವು ಸಾಧಿಸಿತು, ಇದು ಗೆ ದೊಡ್ಡ ಹೊಡೆತ ನೀಡಿತು.

ಮತಬ್ಯಾಂಕ್ ಶೇಕಡಾವಾರು ಗಣನೀಯಾವಾಗಿ ಕುಸಿತ ಕಂಡಿತು. ಈ ಸಂದರ್ಭದಲ್ಲಿ ತನ್ನ ರಾಜಕೀಯ ಭವಿಷ್ಯವನ್ನು ಉಳಿಸಿಕೊಳ್ಳಲು ಮತ್ತೆ ಮೈತ್ರಿ ಕಡೆ ಮುಖ ಮಾಡಿತು. ಬಿಜೆಪಿ ಜತೆಗಿನ ಮೈತ್ರಿ ಮೂಲಕ ರಾಜಕೀಯದಲ್ಲಿ ಹೊಸ ಅವಕಾಶವನ್ನು ಹುಡುಕಲು ಪ್ರಯತ್ನಮಾಡುತ್ತಿದೆ.

ಬಿಜೆಪಿ ಜೊತೆಗಿನ ಮೈತ್ರಿ

2023ರ ವಿಧಾನಸಭೆ ಚುನಾವಣೆಯಲ್ಲಿ ಕೇವಲ 19 ಸ್ಥಾನಗಳಲ್ಲಿ ಗೆಲುವು ಸಾಧಿಸಿದ ಜೆಡಿಎಸ್ ಭಾರೀ ಕುಸಿತ ಕಂಡಿತು. ಈ ಹಿನ್ನೆಲೆ, ತನ್ನ ರಾಜಕೀಯ ಭವಿಷ್ಯವನ್ನು ಉಳಿಸಿಕೊಳ್ಳಲು 2023ರ ಚುನಾವಣೆಯ ನಂತರ ಜೆಡಿಎಸ್ ಬಿಜೆಪಿ ಜತೆಗೆ ಮೈತ್ರಿ ಮಾಡಿಕೊಂಡಿತು. ಈ ಮೈತ್ರಿ ಹಲವು ರಾಜಕೀಯ ಲೆಕ್ಕಾಚಾರಗಳ ಆಧಾರದ ಮೇಲೆ ನಡೆಯಿತು.

2024ರ ಲೋಕಸಭಾ ಚುನಾವಣೆಯಲ್ಲಿ ಈ ಮೈತ್ರಿಯಿಂದ ಜೆಡಿಎಸ್ ಮೂರು ಕ್ಷೇತ್ರಗಳಲ್ಲಿ ಟಿಕೆಟ್ ಪಡೆಯುವಲ್ಲಿ ಯಶಸ್ವಿಯಾಯಿತು. ಎರಡು ಕ್ಷೇತ್ರಗಳಲ್ಲಿ ಜೆಡಿಎಸ್ ಸುಲಭವಾಗಿ ಗೆಲುವು ಸಾಧಿಸಿತು, ಹಾಸನ ಲೋಕಸಭಾ ಕ್ಷೇತ್ರವನ್ನು ಕಳೆದುಕೊಂಡರೂ ಕೂಡ ಕುಮಾರಸ್ವಾಮಿಗೆ ಕೇಂದ್ರದಲ್ಲಿ ದೊಡ್ಡ ಖಾತೆಯ ಮಂತ್ರಿ ಸ್ಥಾನ ಸಿಕ್ಕಿದ್ದು ಜೆಡಿಎಸ್‌ಗೆ ದೊಡ್ಡ ಲಾಭ ತಂದುಕೊಟ್ಟಿತು.

ಆದರೂ ಬಿಜೆಪಿ ಜೊತೆಗಿನ ಮೈತ್ರಿಯನ್ನು ಸ್ವಂತ ಜೆಡಿಎಸ್ ಶಾಸಕರು, ನಾಯಕರುಗಳೇ ಸಾರ್ವಜನಿಕವಾಗಿ ವಿರೋಧಿಸಿದರು. ಕೆಲವು ಕ್ಷೇತ್ರಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಎದುರಾಳಿಯಾಗಿದ್ದಾರೆ; ಹಾಗೆಯೇ ಪಕ್ಷದ ಸಿದ್ಧಾಂತ ಮತ್ತು ರಾಜಕೀಯ ನಿಲುವುಗಳ ವಿರೋಧಗಳೂ ಕೂಡ ಇವೆ. ಕೆಲ ಬಿಜೆಪಿಗರು ಈ ಮೈತ್ರಿಗೆ ವಿರುದ್ಧವಾಗಿ ಆಗಾಗ ಮಾತನಾಡುತ್ತಿರುವುದು ಎಲ್ಲರಿಗೂ ತಿಳಿದ ವಿಚಾರವೇ.

ಬಿಜೆಪಿ ಜತೆಗಿನ ಮೈತ್ರಿ ಜೆಡಿಎಸ್‌ಗೆ ತಾತ್ಕಾಲಿಕ ರಾಜಕೀಯ ಲಾಭ ನೀಡಿರಬಹುದು. ಆದರೆ ದೀರ್ಘಾವಧಿಯಲ್ಲಿ ಈ ಮೈತ್ರಿಯಿಂದ ಪಕ್ಷದ ಮತಬ್ಯಾಂಕ್ ಮತ್ತು ಸಂಘಟನಾ ಶಕ್ತಿಯ ಮೇಲೆ ದೊಡ್ಡ ಪರಿಣಾಮ ಬೀರುತ್ತದೆ.

ಈ ಎರಡು ವರ್ಷಗಳಲ್ಲಿ ಜೆಡಿಎಸ್ ಹೊಸ ಸವಾಲುಗಳನ್ನು ಎದುರಿಸುತ್ತಿದೆ. ವಿಶೇಷವಾಗಿ ''ಜೆಡಿಎಸ್ ತನ್ನ ಸ್ವತಂತ್ರ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆಯೇ?'' ಎಂಬ ಪ್ರಶ್ನೆ ರಾಜಕೀಯ ವಲಯದಲ್ಲಿ ಕೇಳಿಬರುತಿದೆ.

ಸ್ವತಂತ್ರ ಅಸ್ತಿತ್ವದ ಸಂಕಷ್ಟ

ಜೆಡಿಎಸ್ ತನ್ನ ರಾಜಕೀಯವನ್ನು ಪ್ರಾದೇಶಿಕ ಜಾತ್ಯತೀತ ಮತ್ತು ಗ್ರಾಮೀಣ ಆಧಾರದ ಮೇಲೆ ಕಟ್ಟಿಕೊಂಡಿದೆ. ಆದರೆ ಬಿಜೆಪಿ ಜತೆಗಿನ ಮೈತ್ರಿ ನಂತರ ಪಕ್ಷದ ಮೂಲ ಸಿದ್ಧಾಂತ ಮತ್ತು ರಾಜಕೀಯ ನಿಲುವುಗಳ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ.

ಜಾತ್ಯತೀತ ಪದವನ್ನು ಮರೆತು ಧರ್ಮದ ಹೆಸರಿನಲ್ಲಿ ರಾಜಕೀಯ ಮಾಡಲು ಮುಂದಾಗಿದೆ. ನಾಗಮಂಗಲ ಮತ್ತು ಮದ್ದೂರಿನ ಕೋಮುಗಲಭೆ, ಕೆರಗೋಡು ಹನುಮ ಧ್ವಜ ವಿವಾದದಲ್ಲಿ ನೇರ ಕುಮಾರಸ್ವಾಮಿಯವರೇ ಹೋಗಿ ನಿಂತದ್ದು ಇದಕ್ಕೆ ಸಾಕ್ಷಿಯಾಗಿದೆ.

ಬಿಜೆಪಿ ಜತೆಗಿನ ಮೈತ್ರಿಯಿಂದ ಪಕ್ಷದ ಸ್ವತಂತ್ರ ಅಸ್ತಿತ್ವದ ಮೇಲೆ ಪರಿಣಾಮ ಬೀರಿದೆ. ಅಧಿಕಾರದ, ರಾಜಕೀಯ ಲೆಕ್ಕಾಚಾರದ ಮೇಲೆ ರಾಷ್ಟ್ರೀಯ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಳ್ಳುವುದರಿಂದ ಕೆಲವು ರಾಜಕೀಯ ಲಾಭವಾದರೂ, ಪಕ್ಷದ ಸಿದ್ಧಾಂತ ಮತ್ತು ರಾಜಕೀಯ ನಿಲುವುಗಳ ಬಗ್ಗೆ ತನ್ನ ಮತದಾರರಲ್ಲಿ ಗೊಂದಲ ಉಂಟುಮಾಡಿದೆ. ಹಲವು ಬಾರಿ ಮೈತ್ರಿಗಳ ಬದಲಾವಣೆಯಿಂದ ಕಾರ್ಯಕರ್ತರಲ್ಲಿಯೂ ಕೂಡ ಅಸಮಾಧಾನ ಕಂಡುಬಂದಿದೆ.

ಪಕ್ಷದ ನಾಯಕತ್ವದ ವಿಚಾರವಾಗಿಯೂ ಚರ್ಚೆಯಲ್ಲಿದೆ. ದೇವೇಗೌಡರು ಮತ್ತು ಅವರ ಕುಟುಂಬದ ಸುತ್ತ ಪಕ್ಷದ ರಾಜಕೀಯ ಕೇಂದ್ರೀಕೃತವಾಗಿದೆ ಎಂಬುವ ಟೀಕೆಗಳು ಹಲವು ವರ್ಷಗಳಿಂದ ಕೇಳಿಬರುತ್ತಿವೆ. ಕುಟುಂಬ ರಾಜಕೀಯದಿಂದ ಹೊಸ ನಾಯಕತ್ವ ಬೆಳೆಸುವಲ್ಲಿ ದೊಡ್ಡ ಅಡ್ಡಿಯಾಗುತ್ತಿದೆ. ಇಂದಿನ ಯುವ ಮತದಾರರನ್ನು ಸೆಳೆಯಲು ಹೊಸ ಮುಖಗಳು ಮತ್ತು ಹೊಸ ರಾಜಕೀಯ ನಾಯಕರ ಅಗತ್ಯವಿದೆ. ಕುಂಟುಂಬ ರಾಜಕೀಯದಿಂದ ಸ್ವಲ್ಪ ಹೊರಬಂದು ಹೊಸಬರಿಗೆ, ಯುವಜನರಿಗೆ ಹೆಚ್ಚು ಆದ್ಯತೆ ಕೊಡುವುದು ಅನಿವಾರ್ಯ.

ಅಳಿವಿನ ಹಾದಿಯತ್ತ ಜೆಡಿಎಸ್?

ಯಾವುದೇ ಸರ್ಕಾರ ರಚನೆಗೆ ನಿರ್ಣಾಯಕ ಪಕ್ಷವಾಗಿದ್ದ ಜೆಡಿಎಸ್, ಈಗ ತನ್ನ ಅಸ್ತಿತ್ವದ ಕುರಿತಾಗಿ ಗಂಭೀರ ಪ್ರಶ್ನೆಗಳನ್ನು ಎದುರಿಸುತ್ತಿದೆ. ಜೆಡಿಎಸ್ ಅಳಿವಿನ ಹಾದಿಯತ್ತ ಸಾಗುತ್ತಿದೆಯೇ? ಎಂಬುದು ಹೆಚ್ಚು ಚರ್ಚೆಯಾಗುತ್ತಿದೆ.

ಬಿಜೆಪಿ ಜತೆ ಮೈತ್ರಿ ನಂತರ ಮೊದಲ ಚುನಾವಣೆಯಲ್ಲೇ ಸೋಲು ಕಂಡಿತು, ಒಕ್ಕಲಿಗ ಮತಗಳೇ ನಿರ್ಣಾಯಕವಾಗಿರುವ ಹಾಗೂ ಜೆಡಿಎಸ್ ಭದ್ರಕೋಟೆ ಎಂದೇ ಗುರುತಿಸಿಕೊಂಡಿದ್ದ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಸೋಲನ್ನು ಅನುಭವಿಸಿತು.

ಇದಾದ ನಂತರದಲ್ಲಿ ಕುಮಾರಸ್ವಾಮಿ ರಾಜೀನಾಮೆಯಿಂದ ತೆರವುಗೊಂಡಿದ್ದ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿಯನ್ನು ಕಣಕ್ಕಿಳಿಸಿ ಹೀನಾಯವಾಗಿ ಸೋಲು ಕಂಡಿತು. ಕುಮಾರಸ್ವಾಮಿ ಎರಡು ಬಾರಿ ಸ್ಪರ್ಧಿಸಿ ಗೆಲುವು ಕಂಡಿದ್ದ ಸ್ವಕ್ಷೇತ್ರದಲ್ಲಿ ಸೋಲು ಕಂಡಿದ್ದು ಜೆಡಿಎಸ್‌ಗೆ ಭಾರೀ ಹಿನ್ನಡೆಯಾಯಿತು.

2018ರ ವಿಧಾನಸಭೆ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿ 7ಕ್ಕೆ 7 ವಿಧಾನಸಭಾ ಸ್ಥಾನಗಳನ್ನು ಗೆದ್ದು ಜೆಡಿಎಸ್ ಭದ್ರಕೋಟೆಯಾಗಿ ಮಾಡಿಕೊಂಡಿತ್ತು, ಪಕ್ಷದ ರಾಜಕೀಯ ನಿಲುವುಗಳಿಂದ 2023ರ ಚುನಾವಣೆಯಲ್ಲಿ ಕೇವಲ ಕೆ ಆರ್ ಪೇಟೆ ಒಂದು ವಿಧಾನಸಭಾ ಕ್ಷೇತ್ರ ಗೆದ್ದು ತನ್ನ ಅಸ್ತಿತ್ವವನ್ನು ಬಹುಪಾಲು ಕಳೆದುಕೊಂಡಿತು.

ದಿನದಿಂದ ದಿನಕ್ಕೆ ಜೆಡಿಎಸ್ ಅಳಿವಿನ ಹಾದಿಯತ್ತ ಸಾಗುತ್ತಿದೆ. ಪಕ್ಷ ಸಂಘಟನೆಯಿಲ್ಲದೆ ಬಿಜೆಪಿಯ ಕೋಮು ರಾಜಕೀಯಕ್ಕೆ ಬಲಿಯಾಗಿ ತನ್ನ ಹಾದಿಯನ್ನು ಅಂತ್ಯ ಮಾಡಿಕೊಳ್ಳುತ್ತಿದೆ.

ಜೆಡಿಎಸ್‌ನ 18 ಮಂದಿ ಶಾಸಕರು ಇದ್ದರೂ, ಮೊನ್ನೆ ನಡೆದ ವಿಧಾನ ಪರಿಷತ್ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಗೆ 14 ಮತ ಬಿದ್ದದ್ದು ಪಕ್ಷವು ಅಳಿವಿನ ಹಾದಿಯ ಕಡೆ ಸಾಗುತ್ತಿರುವುದಕ್ಕೆ ಉತ್ತಮ ಉದಾಹರಣೆಯಾಗಿದೆ. ತಮ್ಮ ಶಾಸಕರುಗಳಿಗೆ ಪಕ್ಷದ ಮೇಲೆ ನಂಬಿಕೆ ಇಲ್ಲದಂತಾಗಿದೆ. ಮೈತ್ರಿ ಹೀಗೆಯೇ ಮುಂದುವರೆದರೆ ಜಾತ್ಯತೀತ ಪಕ್ಷ ಜೆಡಿಎಸ್, ಕೋಮುವಾದಿ ಪಕ್ಷದ ರಾಜಕೀಯ ಆಟಕ್ಕೆ ಬಲಿಯಾಗಿ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುವಲ್ಲಿ ಯಾವುದೇ ಅನುಮಾನವಿಲ್ಲ. 2028ರ ಚುನಾವಣೆಯಲ್ಲಿ ಜೆಡಿಎಸ್ ತನ್ನ ಎಲ್ಲ ಮತಬ್ಯಾಂಕ್ ಬಿಜೆಪಿಗೆ ಒಪ್ಪಿಸಿ ಕೈಕಟ್ಟಿ ನಿಲ್ಲುವಂತಾದರೂ ಅಚ್ಚರಿಪಡಬೇಕಾಗಿಲ್ಲ.

ವಿಜಯಪುರ 829 ಅಂಗನವಾಡಿಗಳ ಸ್ವಂತ ಕಟ್ಟಡದ ನಿರೀಕ್ಷೆ ಹುಸಿ

829 ಅಂಗನವಾಡಿಗಳ ಸ್ವಂತ ಕಟ್ಟಡದ ನಿರೀಕ್ಷೆ ಹುಸಿಯಾಗಿಯೇ ಉಳಿದಿದ್ದು, ಮಕ್ಕಳ ಸಮಗ್ರ ಬೆಳವಣಿಗೆ, ಆರೋಗ್ಯ ರಕ್ಷಣೆ ಹಾಗೂ ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಭದ್ರ ಅಡಿಪಾಯವಾಗುವ ಅಂಗನವಾಡಿ ಕೇಂದ್ರಗಳು ಜಿಲ್ಲೆಯ ಅನೇಕ ಕಡೆಗಳಲ್ಲಿ ಇನ್ನೂ ಮೂಲಸೌಕರ್ಯಗಳ ಕೊರತೆಯಿರುವ ಬಾಡಿಗೆ ಕಟ್ಟಡಗಳಲ್ಲೇ ಕಾರ್ಯ ನಿರ್ವಹಿಸುತ್ತಿವೆ.


ಸುರಕ್ಷಿತ ಕಟ್ಟಡ, ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ ಹಾಗೂ ಮಕ್ಕಳ ಕಲಿಕೆಗೆ ಅಗತ್ಯವಾದ ಸೌಲಭ್ಯಗಳ ಅಭಾವ ಕಾಡುತ್ತಿದ್ದು, ಮಕ್ಕಳ ಭವಿಷ್ಯ ರೂಪಿಸುವ ಈ ಕೇಂದ್ರಗಳಿಗೆ ಶಾಶ್ವತ ಮತ್ತು ಗುಣಮಟ್ಟದ ಮೂಲಸೌಕರ್ಯ ಕಲ್ಪಿಸುವಲ್ಲಿ ಸರ್ಕಾರ ತೋರುತ್ತಿರುವ ನಿರ್ಲಕ್ಷ್ಯವು ಶಿಕ್ಷಣ ಮತ್ತು ಮಕ್ಕಳ ಕಲ್ಯಾಣದ ಬಗ್ಗೆ ಇರುವ ಆದ್ಯತೆಯ ಕೊರತೆಯನ್ನು ಸ್ಪಷ್ಟವಾಗಿ ಬಿಂಬಿಸುತ್ತಿದೆ.

ವಿಜಯಪುರ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಸ್ಥಿತಿ ಮಕ್ಕಳ ಸಮಗ್ರ ಬೆಳವಣಿಗೆಗೆ ಅಗತ್ಯವಾದ ಮೂಲಸೌಕರ್ಯಗಳ ಕೊರತೆಯನ್ನು ಬಯಲಿಗೆಳೆಯುತ್ತದೆ. ಜಿಲ್ಲೆಯ ಒಟ್ಟು 7,755 ಅಂಗನವಾಡಿ ಕೇಂದ್ರಗಳಲ್ಲಿ 829 ಕೇಂದ್ರಗಳು ಇನ್ನೂ ಬಾಡಿಗೆ ಕಟ್ಟಡಗಳಲ್ಲೇ ಕಾರ್ಯ ನಿರ್ವಹಿಸುತ್ತಿವೆ. ಕೇವಲ 1,489 ಕೇಂದ್ರಗಳಿಗೆ ಮಾತ್ರ ಸ್ವಂತ ಕಟ್ಟಡಗಳ ಸೌಲಭ್ಯವಿದೆ. ಉಳಿದ ಕೇಂದ್ರಗಳು ಶಾಲಾ ಕಟ್ಟಡಗಳು, ಗ್ರಾಮ ಪಂಚಾಯಿತಿ ಕಚೇರಿಗಳು, ಸಮುದಾಯ ಭವನಗಳು ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿವೆ.

ನಗರ ಪ್ರದೇಶದ ಕೇಂದ್ರಗಳಿಗೆ ತಿಂಗಳಿಗೆ ರೂ. 3,000 ಹಾಗೂ ಗ್ರಾಮೀಣ ಪ್ರದೇಶದ ಕೇಂದ್ರಗಳಿಗೆ ರೂ. 2,000 ಬಾಡಿಗೆ ನಿಗದಿಪಡಿಸಲಾಗಿದ್ದರೂ, ಈ ಮೊತ್ತದಲ್ಲಿ ಮಕ್ಕಳಿಗೆ ಸುರಕ್ಷಿತ, ವಿಶಾಲ ಮತ್ತು ಅಗತ್ಯ ಸೌಲಭ್ಯಗಳನ್ನು ಹೊಂದಿರುವ ಕಟ್ಟಡಗಳನ್ನು ಪಡೆಯುವುದು ದುಸ್ತರವಾಗಿದೆ. ಪರಿಣಾಮವಾಗಿ, ಅನೇಕ ಅಂಗನವಾಡಿಗಳು ಇಕ್ಕಟ್ಟಾದ ಕೊಠಡಿಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಮಕ್ಕಳ ಆಟ, ಕಲಿಕೆ ಹಾಗೂ ಪೌಷ್ಟಿಕ ಆಹಾರ ವಿತರಣೆಗೆ ಸೂಕ್ತ ವಾತಾವರಣದ ಕೊರತೆ ಎದುರಿಸುತ್ತಿವೆ.

ಶುದ್ಧ ಕುಡಿಯುವ ನೀರು, ಶೌಚಾಲಯ, ಅಡುಗೆ ವ್ಯವಸ್ಥೆ ಮತ್ತು ಸುರಕ್ಷಿತ ಆಟದ ಮೈದಾನದಂತಹ ಮೂಲಭೂತ ಸೌಲಭ್ಯಗಳ ಅಭಾವವೂ ಸಾಮಾನ್ಯ ಸಮಸ್ಯೆಯಾಗಿದೆ. ಮಕ್ಕಳ ಆರೋಗ್ಯ, ಪೌಷ್ಟಿಕತೆ ಮತ್ತು ಪೂರ್ವ ಪ್ರಾಥಮಿಕ ಶಿಕ್ಷಣದ ಭದ್ರ ಅಡಿಪಾಯವಾಗಬೇಕಾದ ಅಂಗನವಾಡಿ ಕೇಂದ್ರಗಳು ಸಮರ್ಪಕ ಮೂಲಸೌಕರ್ಯಗಳ ಕೊರತೆಯಿಂದ ತಮ್ಮ ಉದ್ದೇಶವನ್ನು ಪೂರ್ಣ ಪ್ರಮಾಣದಲ್ಲಿ ಈಡೇರಿಸಲು ಪರದಾಡುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ.

ಸರ್ಕಾರ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಒದಗಿಸುತ್ತಿದ್ದರೂ, ಹೆಚ್ಚುತ್ತಿರುವ ಬೇಡಿಕೆಗೆ ತಕ್ಕಂತೆ ಕಟ್ಟಡಗಳ ಲಭ್ಯತೆ ಸಾಧ್ಯವಾಗುತ್ತಿಲ್ಲ. ಜನಸಂಖ್ಯೆಯ ಏರಿಕೆ ಮತ್ತು ಹೊಸ ಅಂಗನವಾಡಿ ಕೇಂದ್ರಗಳ ಸ್ಥಾಪನೆಯಿಂದ ಶಾಶ್ವತ ಕಟ್ಟಡಗಳ ಅಗತ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.



ಸದ್ಯ ಅನೇಕ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಅದಕ್ಕಾಗಿ ಸರ್ಕಾರ ಬಾಡಿಗೆ ವೆಚ್ಚವನ್ನು ಭರಿಸುತ್ತಿದೆ. ಆದರೆ ಮಕ್ಕಳ ಆರೋಗ್ಯ, ಪೌಷ್ಟಿಕತೆ ಮತ್ತು ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಸುರಕ್ಷಿತ ಹಾಗೂ ಅಗತ್ಯ ಮೂಲಸೌಕರ್ಯ ಹೊಂದಿರುವ ಸ್ವಂತ ಕಟ್ಟಡಗಳೇ ಹೆಚ್ಚು ಪರಿಣಾಮಕಾರಿ ಮತ್ತು ದೀರ್ಘಕಾಲಿಕ ಪರಿಹಾರ ಎಂದು ತಜ್ಞರು ಅಭಿಪ್ರಾಯಪಡುತ್ತಾರೆ.

ವಿಜಯಪುರ ನಗರದಲ್ಲಿ ಸ್ವಂತ ಕಟ್ಟಡ 91 ಇದ್ದರೆ, ಬಾಡಿಗೆ 230 ಹಾಗೂ ಸರ್ಕಾರಿ ಕಟ್ಟಡಗಳಲ್ಲಿ 30 ಅಂಗನವಾಡಿ ಕೇಂದ್ರಗಳು ನಡೆಯುತ್ತಿವೆ. ವಿಜಯಪುರ ಗ್ರಾಮೀಣ ಭಾಗದಲ್ಲಿ ಸ್ವಂತ ಕಟ್ಟಡ 257 ಇದ್ದರೆ, 56 ಬಾಡಿಗೆ ಹಾಗೂ ಸರ್ಕಾರಿ ಕಟ್ಟಡಗಳಲ್ಲಿ 87 ಕೇಂದ್ರಗಳಿವೆ. ಸಿಂದಗಿ ತಾಲ್ಲೂಕಿನಲ್ಲಿ 249 ಸ್ವಂತ ಕಟ್ಟಡಗಳಿದ್ದರೆ, 155 ಬಾಡಿಗೆ ಹಾಗೂ 82 ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿವೆ.

ಮುದ್ದೇಬಿಹಾಳ ತಾಲ್ಲೂಕಿನಲ್ಲಿ 255 ಸ್ವಂತ ಕಟ್ಟಡಗಳಿದ್ದರೆ, 155 ಬಾಡಿಗೆ ಹಾಗೂ 67 ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿವೆ. ಇಂಡಿ ತಾಲ್ಲೂಕಿನಲ್ಲಿ 227 ಸ್ವಂತ ಕಟ್ಟಡಗಳಿದ್ದರೆ, 114 ಬಾಡಿಗೆ ಕಟ್ಟಡಗಳು ಹಾಗೂ 65 ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿವೆ. ಚಡಚಣ ತಾಲ್ಲೂಕಿನಲ್ಲಿ 121 ಸ್ವಂತ ಕಟ್ಟಡಗಳಿದ್ದರೆ, 50 ಬಾಡಿಗೆ ಕಟ್ಟಡಗಳಲ್ಲಿ ಹಾಗೂ 27 ಸರ್ಕಾರಿ ಕಟ್ಟಡಗಳಲ್ಲಿ ಅಂಗನವಾಡಿ ಕೇಂದ್ರಗಳು ನಡೆಯುತ್ತಿವೆ. ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ 301 ಸ್ವಂತ ಕಟ್ಟಡಗಳಿದ್ದರೆ, 85 ಬಾಡಿಗೆ ಕಟ್ಟಡಗಳು ಹಾಗೂ 70 ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿವೆ.

ಗ್ರಾಮೀಣ ಭಾಗಗಳ ಅನೇಕ ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಮಕ್ಕಳ ಬೆಳವಣಿಗೆಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿವೆ. ಹಲವು ಕಡೆ ಒಂದೇ ಕೋಣೆಯಲ್ಲಿ ಮಕ್ಕಳಿಗೆ ಪಾಠ ಹೇಳುವುದು, ಪೌಷ್ಟಿಕ ಆಹಾರ ತಯಾರಿಕೆ ಮತ್ತು ವಿತರಣೆ, ಅಗತ್ಯ ಸಾಮಗ್ರಿಗಳ ಸಂಗ್ರಹಣೆ ಸೇರಿದಂತೆ ಎಲ್ಲಾ ಚಟುವಟಿಕೆಗಳು ನಡೆಯುತ್ತಿವೆ.

ಮಳೆಗಾಲದಲ್ಲಿ ಮೇಲ್ಛಾವಣಿ ಸೋರುವುದು, ಬೇಸಿಗೆಯಲ್ಲಿ ಅತಿಯಾದ ಬಿಸಿಲಿನ ತಾಪ, ಶೌಚಾಲಯ ಹಾಗೂ ಸುರಕ್ಷತಾ ವ್ಯವಸ್ಥೆಗಳ ಕೊರತೆಯಿಂದ ಮಕ್ಕಳು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿ ಮಕ್ಕಳಿಗೆ ಗುಣಮಟ್ಟದ ಪೂರ್ವಪ್ರಾಥಮಿಕ ಶಿಕ್ಷಣ ಮತ್ತು ಆರೈಕೆ ಒದಗಿಸುವ ಉದ್ದೇಶಕ್ಕೆ ಅಡ್ಡಿಯಾಗುತ್ತಿದೆ.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಪ್ರದೀಪ್ ಪಾಟೀಲ ನಾಗರದಿನ್ನಿ ಮಾತನಾಡಿ, ''ಗ್ರಾಮೀಣ ಭಾಗದ ಬಡ ಹಾಗೂ ಮಧ್ಯಮ ವರ್ಗದ ಮಕ್ಕಳ ಸಮಗ್ರ ಬೆಳವಣಿಗೆಗೆ ಅಂಗನವಾಡಿ ಕೇಂದ್ರಗಳು ಅತ್ಯಂತ ಪ್ರಮುಖವಾಗಿವೆ. ಆದರೆ ಸರ್ಕಾರದ ನಿರ್ಲಕ್ಷ್ಯ ಹಾಗೂ ಜನಪ್ರತಿನಿಧಿಗಳ ಕೊರತೆಯಿಂದ ಅನೇಕ ಅಂಗನವಾಡಿ ಕೇಂದ್ರಗಳು ಮೂಲಭೂತ ಸೌಲಭ್ಯಗಳಿಲ್ಲದೆ ಕಾರ್ಯ ನಿರ್ವಹಿಸುತ್ತಿವೆ'' ಎಂದು ಆತಂಕ ವ್ಯಕ್ತಪಡಿಸಿದರು.

''ಹಿಂದೆ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯವಸ್ಥೆ ಅಸ್ತಿತ್ವದಲ್ಲಿದ್ದಾಗ ಸ್ಥಳೀಯ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ತ್ವರಿತವಾಗಿ ಪರಿಹರಿಸುವ ಅವಕಾಶವಿತ್ತು. ಆದರೆ ಅಧಿಕಾರ ವಿಕೇಂದ್ರೀಕರಣಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡದ ಕಾರಣ ಇಂತಹ ಸಮಸ್ಯೆಗಳು ಹೆಚ್ಚುತ್ತಿವೆ'' ಎಂದು ಅಭಿಪ್ರಾಯಪಟ್ಟರು.

''ಮಕ್ಕಳ ಸುರಕ್ಷಿತ ಮತ್ತು ಗುಣಮಟ್ಟದ ಕಲಿಕಾ ವಾತಾವರಣಕ್ಕಾಗಿ ರಾಜ್ಯ ಸರ್ಕಾರ ಅಂಗನವಾಡಿ ಕೇಂದ್ರಗಳಿಗೆ ಶಾಶ್ವತ ಸ್ವಂತ ಕಟ್ಟಡಗಳನ್ನು ನಿರ್ಮಿಸಿ, ಅಗತ್ಯ ಮೂಲಸೌಕರ್ಯ ಮತ್ತು ಸೌಲಭ್ಯಗಳನ್ನು ಒದಗಿಸಬೇಕಿದೆ'' ಎಂದು ಒತ್ತಾಯಿಸಿದರು.

''ಅಂಗನವಾಡಿ ಕೇಂದ್ರಗಳಿಗೆ ಶಾಶ್ವತ ಕಟ್ಟಡ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗುವುದು. ಸೂಕ್ತ ಸ್ಥಳಾವಕಾಶ ಇರುವ ಸರ್ಕಾರಿ ಶಾಲಾ ಕಟ್ಟಡಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ಸ್ಥಳಾಂತರಿಸಲು ಆದ್ಯತೆ ನೀಡಲಾಗುವುದು'' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಡಾ. ಸಂತೋಷಕುಮಾರ ಎಚ್ ಈದಿನ.ಕಾಮ್‌ಗೆ ಪ್ರತಿಕ್ರಿಯಿಸಿದರು.

ಆಟದ ಮೈದಾನ, ಶುದ್ಧ ಕುಡಿಯುವ ನೀರು, ಪ್ರತ್ಯೇಕ ಅಡುಗೆ ಕೊಠಡಿ, ಶೌಚಾಲಯ ಹಾಗೂ ಸುರಕ್ಷಿತ ಕಲಿಕಾ ವಾತಾವರಣ ಕಲ್ಪಿಸುವ ಮೂಲಕ ಅಂಗನವಾಡಿಗಳ ಗುಣಮಟ್ಟ ಹೆಚ್ಚಿಸಬೇಕಾಗಿದೆ. ಮಕ್ಕಳ ಭವಿಷ್ಯದ ಮೊದಲ ಹೆಜ್ಜೆಯಾಗಿರುವ ಅಂಗನವಾಡಿ ಕೇಂದ್ರಗಳಿಗೆ ಮೂಲಸೌಕರ್ಯ ಒದಗಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ.

ಜಿಲ್ಲೆಯಲ್ಲಿರುವ ನೂರಾರು ಬಾಡಿಗೆ ಅಂಗನವಾಡಿ ಕೇಂದ್ರಗಳಿಗೆ ಶೀಘ್ರದಲ್ಲೇ ಸ್ವಂತ ಕಟ್ಟಡಗಳನ್ನು ನಿರ್ಮಿಸಿ ಸುರಕ್ಷಿತ ಹಾಗೂ ಗುಣಮಟ್ಟದ ಕಲಿಕಾ ವಾತಾವರಣ ಕಲ್ಪಿಸುವತ್ತ ಸರ್ಕಾರ ಮತ್ತು ಜನಪ್ರತಿನಿಧಿಗಳು ಮುಂದಾಗಲಿ ಎಂಬುದು ಶಿಕ್ಷಣ ಪ್ರೇಮಿಗಳ ಆಶಯವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR